

# ಸಿಹಿ ಕಹಿ

SIHI KAHI

ಕನ್ನಡ ದಿನಪತ್ರಿಕೆ, ಬಾಗಲಕೋಟೆ

ಬಾಗಲಕೋಟೆಯಿಂದ ಪ್ರಕಟಿತ

KANNADA DAILY MORNING BAGALKOT

ಸಂಪಾದಕರು : ಮಾರುತಿ ಬಸವಂತಪ್ಪ ಹೊಸಮನಿ


Editor : MARUTI BASAVANTAPPA HOSAMANI

Cell : +91 9741319119

RNI REG No. : KARKAN/2016/75068

Volume : 08 | Issue : 47 | Sunday 26-10-2025 | E-mail : maruti.b.hosamani76@gmail.com | Page: 4 | Price : Rs. 1/-







## ನಾಳೆ ದಾವಣಗೆರೆ ನುಡಿ ಸಡಗರ – ಕಾರ್ಯಕ್ರಮ ಆಯೋಜನೆ

**ಸಿಹಿ ಕಹಿ ಸುದ್ದಿ,**

**ದಾವಣಗೆರೆ :** ಚೇತನ ಪ್ರತಿಷ್ಠಾನ ಧಾರವಾಡ ಇವರ ಆಯೋಜಿಸಿರುವ ದಾವಣಗೆರೆ ನುಡಿ ಸಡಗರ ಪಟ್ಟಣದ ರೋಟರಿ ಬಾಲ ಭವನ ಸೀತಮ್ಮ ಕಾಲೇಜ್ ರಸ್ತೆಯಲ್ಲಿ ದಾವಣಗೆರೆಯಲ್ಲಿ ದಿನಾಂಕ 26–10–2025 ನೇ. ಭಾನುವಾರ ರಂದು ಕಾರ್ಯಕ್ರಮ ಜರಗಲಿದೆ. ಕಾರ್ಯಕ್ರಮದ ಶರಣ ಸಾಹಿತ್ಯ ಪರಿಷತ್ತಿನ ಜಿಲ್ಲಾಧ್ಯಕ್ಷರು. ಸರ್ವಾಧ್ಯಕ್ಷರಾಗಿ ಕೆ.ಬಿ ಪರಮೇಶ್ವರಪ್ಪ, ಉದ್ಘಾಟಕರಾಗಿ ನಿವೃತ್ತ ಜಂಟಿ ನಿರ್ದೇಶಕರು ಸಾರ್ವಜನಿಕ ಶಿಕ್ಷಣ ಇಲಾಖೆ ಎಚ್.ಕೆ ಲಿಂಗರಾಜು, ಅಧ್ಯಕ್ಷತೆ ಡಾ, ಚಂದ್ರಶೇಖರ ಮಾಡಲಗೇರಿ ಅಧ್ಯಕ್ಷರು ಚೇತನ ಫೌಂಡೇಶನ್ ಧಾರವಾಡ, ಮುಖ್ಯ ಅತಿಥಿಗಳಾಗಿ ಶೇಖರಪ್ಪ ವಿ, ರವಿಕುಮಾರ್ ಎನ್. ಎಂ ನಿಕಟ ಪೂರ್ವ ಅಧ್ಯಕ್ಷರು ಜಿಲ್ಲಾ ವಕೀಲರ ಸಂಘ ಅರುಣ್ ಕುಮಾರ್ ಎಲ್ ಹೆಚ್, ಕನ್ನಡ ಸಾಹಿತ್ಯ ಪರಿಷತ್ತಿನ ಜಿಲ್ಲಾ ಅಧ್ಯಕ್ಷರಾದ ಬಿ ವಾಮದೇವಪ್ಪ, ಡಾ, ಪುಷ್ಪ ಲತಾ, ಶಿವಲಿಂಗಪ್ಪ ಅಣ್ಣಿಗೇರಿ, ಎಂ ವಿಜಯಲಕ್ಷ್ಮಿ, ಪೀರಸಾಬ್ ನದಾಫ್, ವೀರೇಶ್ ಕೆ.ಎಸ್, ನಿರಂಜನ ಕುಮಾರ್ ಎ, ಭಾಗ್ಯಶ್ರೀ ರಜಪೂತ, ರಾಜಕುಮಾರ್ ಮಠ, ಕೋಗಳೂರು ತಿಪ್ಪೇಸ್ವಾಮಿ, ಸೇರಿದಂತೆ ನುಡಿಸಿರಿ ಪ್ರಶಸ್ತಿ ಪುರಸ್ಕೃತರು, ಕನ್ನಡ ನುಡಿಸಿರಿ ಪ್ರಶಸ್ತಿ ಪುರಸ್ಕೃತರು, ಶಿಕ್ಷಣ ರತ್ನ ರಾಜ್ಯ ಪ್ರಶಸ್ತಿ ಪುರಸ್ಕೃತರು, ಚೇತನ ಕ್ರೀಡಾ ಪ್ರಶಸ್ತಿ ಪುರಸ್ಕೃತರು, ಕವಿಗೋಷ್ಠಿ ಚರ್ಚಾ ಸಂವಾದ, ಕಾರ್ಯಕ್ರಮ ಜರುಗಲಿದೆ ಎಂದು ಡಾ ಚಂದ್ರಶೇಖರ ಮಾಡಲಗೇರಿ ಸಂಸ್ಥಾಪಕ ಅಧ್ಯಕ್ಷರು ಚೇತನ ಫೌಂಡೇಶನ್ ಧಾರವಾಡ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಹೋಬಳಿ ವರದಿಗಾರರು, ಸಿಹಿ ಕಹಿ ಕನ್ನಡ ದಿನ ಪತ್ರಿಕೆ ಹಾಗೂ ಎಸ್.ಕೆ ನ್ಯೂಸ್ ಕನ್ನಡ ಚಾನಲ್:ಕೆ.ಎಸ್ ವೀರೇಶ್ ಕೆ ಹೊಸಹಳ್ಳಿ**

## ಪುರಂದರ ಮಂಟಪ ಶ್ರೀ ರಾಘವೇಂದ್ರ ಮಠ ಸಾಕ್ಷ್ಯ ಚಿತ್ರ ಬಿಡುಗಡೆ



**ಧಾರವಾಡ :** ಪರಮಪೂಜ್ಯ ಶ್ರೀ ಶ್ರೀ ಸುಬುಧೇಂದ್ರ ತೀರ್ಥ ಶ್ರೀಪಾದಂಗಳವರ ಆಶೀರ್ವಾದದೊಂದಿಗೆ ಧಾರವಾಡದ ಪುರಂದರ ಮಂಟಪದ ಶ್ರೀ ರಾಘವೇಂದ್ರ ಮಠದ ಕುರಿತು ವಿದ್ಯಾ ವಿನಾಯಕ ಟ್ರಸ್ಟ್ ನಿರ್ಮಾಣದ ಶ್ರೀ ಸಿದ್ಧಿ ವಿನಾಯಕ ಕಂಬೈನ್ಸ್‌ರವರ ಪುರಂದರ ಮಂಟಪ ಶ್ರೀ ರಾಘವೇಂದ್ರಮಠ ಸಾಕ್ಷ್ಯಚಿತ್ರ ಬಿಡುಗಡೆ ಮಾಡಲಾಯಿತು.

ಧಾರವಾಡದ ಯಾಲಕ್ಕಿ ಶೆಟ್ಟರ ಕಾಲನಿಯ ಪುರಂದರ ಮಂಟಪದಲ್ಲಿ ಮಠದ ಧರ್ಮದರ್ಶಿ ಮೇಲ್ವಿಚಾರಕರಾದ ಸಿ,ನಾಗರಾಜ ಬಿಡುಗಡೆ ಮಾಡಿದರು, ಪಂಡಿತ ಜಿ ವಿ ನವಲಗುಂದ, ಮಠಾಧಿಕಾರಿಗಳಾದ ಪಂಡಿತ ಬಂಡಾಚಾರ್ಯ ಗಿಡದ ಹುಬ್ಬಳ್ಳಿ,ಡಾ ಪ್ರಲ್ಹಾದ ಭಬ್ಬಿ,ಎನ್ ಡಿ ಕುಲಕರ್ಣಿ ,ಜೋಶಿ ,ವಿಜಯ ವಿಠಲಾಚರ್ಯ ,ಬಸವರಾಜ ಹೂಗಾರ,ಅರವಿಂದ ನಾಗಜ್ಜನವರ,ಮುಜುಮದಾರ ,ಸಿ ವೇದವತಿ ,ರತ್ನ ಜೋಶಿ ,ಪದ್ಮ ನವಲಗುಂದ ,ಹರಿಪ್ರಿಯ, ಶ್ರೀನಿವಾಸ ,ಗುರುರಾಜ ದಂಪತಿಗಳು ,ರಮೇಶ್ , ಸಚಿನ್ ಭಜನಾ ಮಂಡಳಿಯ ಸದಸ್ಯರು ಉಪಸ್ಥಿತರಿದ್ದರು ,

ವಿದ್ಯಾ ವಿನಾಯಕ ಟ್ರಸ್ಟ್ ನಿರ್ಮಾಣದ ಈ ಸಾಕ್ಷ್ಯಚಿತ್ರಕ್ಕೆ ಸಾಹಿತ್ಯ. ಶ್ರೀ ಜೋಶಿ ಛಾಯಾಗ್ರಹಣ ವಿನಾಯಕ ಬಸವಾ, ಸಂಗೀತ ರಜತ ಬಸವಾ ,ಸ್ತುತಿ ಶ್ರೀ ಮತಿ ಆಶಾ ಆಚಾರ್ಯ, ಸಂಕಲನ ಸಿದ್ಧಾರ್ಥ್ ಜಾಲಿಹಾಳ ,ಪತ್ರಿಕಾ ಸಂಪರ್ಕ ಡಾ ಪ್ರಭು ಗಂಜಿಹಾಳ , ಡಾ ವೀರೇಶ ಹಂಡಿಗಿ ಡಿಜೈನ್ ನಟರಾಜ ಪತ್ತಾರ ಸಹಕಾರ. ಡಾ,ಕಲ್ಮೇಶ್ ಹಾವೇರಿಪೇಟ್ ,ಕಿಶನರಾವ್ ಎಂ ಕುಲಕರ್ಣಿ ,ಎನ್ ಎಸ್ ಪಾಟೀಲ ,ಪ್ರಮೋದ್ ಜೋಶಿ ,ಶ್ರೀಮತಿ ಲತಾ ಎಂ ಜೋಶಿ ,ಶ್ರೀಮತಿ ಕೀರ್ತಿ ಅರವಿಂದ, ನಿರ್ವಹಣೆ ಆನಂದ ಜೋಶಿ, ರಘು ತುಮಕೂರು ಅವರದಿದ್ದು ಕಿರುಚಿತ್ರ, ಚಲನಚಿತ್ರಗಳ ನಿರ್ದೇಶಕ ಅರವಿಂದ ಮುಳಗುಂದ ನಿರ್ದೇಶನ ಮಾಡಿದ್ದಾರೆ. ಈಗಾಗಲೇ ಸಾಕ್ಷ್ಯಚಿತ್ರ ಯೂಟ್ಯೂಬ್ ನಲ್ಲಿ ಬಿಡುಗಡೆಯಾಗಿ ಮೆಚ್ಚುಗೆ ಗಳಿಸಿದೆ.

**–ಡಾ.ಪ್ರಭು ಗಂಜಿಹಾಳ ಮೊ: 9448775346**

## ಕನ್ನಡ ಬಾವುಟಕ್ಕೆ ಸರಕಾರದ ಮಾನ್ಯತೆ ನೀಡಬೇಕು – ಚುಟುಕು ಸಾಹಿತ್ಯ ಪರಿಷತ್ತಿನ ಮನವಿ

**ಸಿಹಿ ಕಹಿ ಸುದ್ದಿ,**

**ಮಾನ್ವಿ :** ರಾಜ್ಯದ ಅಸ್ಮಿತೆಯ ಸಂಕೇತವಾದ ಹಳದಿಕೆಂಪುನಾಡಬಾವುಟಕ್ಕೆಸರಕಾರದಿಂದ ಅಧಿಕೃತ ಮಾನ್ಯತೆ ನೀಡ ಬೇಕೆಂಬುದು ತಾಲ್ಲೂಕುಚುಟುಕುಸಾಹಿತ್ಯಪರಿಷತ್‌ಅಧ್ಯಕ್ಷ ಮಹ್ಮದ್ ಮುಜೀಬ್ ಹೇಳಿದರು. ಪಟ್ಟಣದ ತಹಶೀಲ್ದಾರ ಕಚೇರಿಯಲ್ಲಿ ಶುಕ್ರವಾರ ಮುಖ್ಯಮಂತ್ರಿ ಅವರಿಗೆ ತಹಸೀಲ್ದಾರರ ಮುಖಾಂತರ ಮನವಿ ಮಾತನಾಡಿದ ಅವರು "ಕನ್ನಡ ಬಾವುಟ ನಮ್ಮ ಅಸ್ತಿತ್ವದ, ಗೌರವದ ಮತ್ತು ಸಾಂಸ್ಕೃತಿಕ ಏಕತೆಯ ಸಂಕೇತವಾಗಿದೆ. 1956 ರಲ್ಲಿ ಏಕೀಕೃತ ರಾಜ್ಯವಾಗಿ ರೂಪುಗೊಂಡ ಕರ್ನಾಟಕ ಇಂದು 52 ನೇ. ವರ್ಷಾಚರಣೆಯನ್ನು ಆಚರಿಸುತ್ತಿರುವ ಸಂದರ್ಭದಲ್ಲಿ ನಾಡ ಬಾವುಟಕ್ಕೆ ಸರಕಾರದ ಮಾನ್ಯತೆ ದೊರೆತರೆ ಅದು ಇತಿಹಾಸ ನಿರ್ಮಾಣವಾಗುತ್ತದೆ.



ಹಲವು ಸಾಹಿತಿಗಳು, ತಜ್ಞರು ಹಾಗೂ ಕನ್ನಡ ಅಭಿಮಾನಿಗಳು ರಾಜ್ಯ ಧ್ವಜ–ಕ್ಕೆ ಮಾನ್ಯತೆ ನೀಡುವುದು ಸಂವಿಧಾನದ ವ್ಯಾಪ್ತಿಯಲ್ಲೇ ಸಾಧ್ಯವೆಂದು ಅಭಿಪ್ರಾಯ ಪಟ್ಟಿದ್ದಾರೆ. ಹೀಗಾಗಿ ಈ ದೀರ್ಘಕಾಲದ ಬೇಡಿಕೆಗೆ ಸ್ಪಂದಿಸಿ ಸರಕಾರವು ಹಳದಿ ಕೆಂಪು ಬಾವುಟಕ್ಕೆ ಅಧಿಕೃತ ಮಾನ್ಯತೆ ನೀಡಬೇಕು," ಎಂದು ಹೇಳಿದರು.


ಅವರು ಮುಂದುವರಿಸಿ "ಕನ್ನಡದ ಗೌರವಕ್ಕಾಗಿ, ಯುವಪೀಳಿಗೆಗೆ ಪ್ರೇರಣೆ ನೀಡಲು ಹಾಗೂ ರಾಜ್ಯದ ಏಕತೆ–ಯ ಸಂಕೇತವಾಗಿ ನಾಡ ಬಾವುಟವನ್ನು ಅಧಿಕೃತವಾಗಿ ಗುರುತಿಸುವುದು ಅವಶ್ಯಕ. ನಾಡ ಬಾವುಟಕ್ಕೆ ಮಾನ್ಯತೆ ಸಿಕ್ಕರೆ ಅದು ಕನ್ನಡಿಗರ ಆತ್ಮಗೌರವದ ವಿಜಯದ ದಿನವಾಗುತ್ತದೆ," ಎಂದರು.

ಈ ಸಂದರ್ಭದಲ್ಲಿ ಉಪಾಧ್ಯಕ್ಷ ಆಂಜನೇಯ ನಸ್ಲಾಪುರ, ಚನ್ನಬಸಯ್ಯ ಸ್ವಾಮಿ, ನರಸಪ್ಪ ಜೂಕುರು, ದೊಡ್ಡಣ್ಣ ಹೂಗಾರ, ರಾಮು ಹೊಳೆಪ್ಪನವರ, ಮನೋಹರ ವಿಶ್ವಕರ್ಮ, ಹನುಮಂತ ಸೀಕಲ್, ಮುತ್ತಣ್ಣ, ಹೊನ್ನಪ್ಪ ಕಟ್ಟಿಮನಿ, ಸಂಜೀವಪ್ಪ ಚೆಲುವಾದಿ, ಬಿ.ವಿಶ್ವನಾಥ, ರಾಮು ನೀರಮಾನ್ವಿ, ಶಿವಕುಮಾರ್ ಚಲ್ಮಲ್, ನಾಗರಾಜ ಸೇರಿದಂತೆ ಚುಟುಕು ಸಾಹಿತ್ಯ ಪರಿಷತ್ತಿನ ಸದಸ್ಯರು, ಕನ್ನಡ ಅಭಿಮಾನಿಗಳು ಹಾಗೂ ವಿವಿಧ ಸಂಘಟನೆಗಳ ಪ್ರತಿನಿಧಿಗಳು ಉಪಸ್ಥಿತರಿದ್ದರು.

**ತಾಲೂಕ ವರದಿಗಾರರು, ಸಿಹಿ ಕಹಿ ಕನ್ನಡ ದಿನ ಪತ್ರಿಕೆ ಹಾಗೂ ಎಸ್.ಕೆ ನ್ಯೂಸ್ ಕನ್ನಡ ಚಾನಲ್: ಹುಸೇನ್.ಭಾಷಾ.ನಕ್ಕುಂದಿ.ಮಾನ್ವಿ**

## ಯಮಸಲ್ಲೇಖನ ಸ್ವೀಕರಿಸಿದ ಆರಿಕಾ ಶ್ರೀ 105 ದರ್ಶನ ಭೂಷಣಮತಿ





**ರಬಕವಿ–ಬನಹಟ್ಟಿ :** ಜೈನ ಧರ್ಮದಲ್ಲಿ ಮಾತ್ರ ಸಲ್ಲೇಖನ ಸ್ವೀಕರಿಸುವ ಅನುಮತಿ ಇದೆ ಎಂದು ಇತಿಹಾಸದಿಂದ ತಿಳಿಯುತ್ತೇವೆ. ಅದರಂತೆ ರಬಕವಿ ಬನಹಟ್ಟಿ ತಾಲೂಕಿನ ಹಳಿಂಗಳಿ ಗ್ರಾಮದ ಭದ್ರಗಿರಿ ಬೆಟ್ಟದಲ್ಲಿ ಶನಿವಾರ ಮಹಾವೀರ ಭಗವಾನರ ಯೋಗ ನಿರೋಧ ದಿನವಾದ ಇಂದು ಜೈನ ಸಮಾಜದ ಹಿರಿಯ ಜೀವಿ ಆರಿಕಾ 105 ದರ್ಶನ ಭೂಷಣಮತಿ ಮಾತಾಜಿಯವರು ಯಮಸಲ್ಲೇಖನ ವೃತ ಸ್ವೀಕರಿಸಿ ತಮ್ಮ ಜೀವಿತಾವಧಿಯ ಅಂತಿಮ ದಿನಗಳಿಗೆ ಸಮೀಪಿಸಿದರು.

ಶನಿವಾರ ಬೆಳಿಗ್ಗೆ ಮಾತಾಜಿಯ ಉಸಿರಾಟದಲ್ಲಿ ತೀವ್ರತೆ ಕಂಡು ಬಂದಿದ್ದು, ಕಳೆದ 120 ದಿನಗಳ ಹಿಂದೆ ಭದ್ರಗಿರಿ ಬೆಟ್ಟದ ಜೈನ ಮುನಿ ಆಚಾರ್ಯ ಶ್ರೀ 108 ಕುಲರತ್ನಭೂಷಣ ಮಹಾರಾಜರಿಂದ ಸಲ್ಲೇಖನ ವೃತ ಪಡೆದಿದ್ದರು.

ಈಗ ಮಾತಾಜಿಯ ಅಂತಿಮ ದಿನಗಳ ಕ್ಷಣಗಣನೆ ಪ್ರಾರಂಭವಾಗಿದ್ದು,

ಸಾವಿರಾರು ಭಕ್ತರು ಇವರ ಅಂತಿಮ ಯಾತ್ರೆಯ ಮೋಕ್ಷದ ದರ್ಶನ ಪಡೆಯಲು ಸಾಗರೋಪಾದಿಯಲ್ಲಿ ಆಗಮಿಸುತ್ತಿದ್ದಾರೆ.

ಮಾತಾಜಿಯವರ ಪಕ್ಕದಲ್ಲಿಯೇ ಕುಳಿತು ಆಚಾರ್ಯ ಶ್ರೀಗಳು ಮಂತ್ರೋಪದೇಶಗಳನ್ನು ಮಾಡುತ್ತಿದ್ದಾರೆ. ಅವರ ಶ್ರೇಷ್ಠ ಆತ್ಮ ಪರಮಾತ್ಮವಾಗಲಿದೆ.

ಅಂತವರ ಅಂತಿಮ ದರ್ಶನ ಪಡೆಯುವುದು ಶ್ರೇಷ್ಠವಾದದ್ದು. ಅವರ 103 ನೇ ವಯೋಮಿತಿಯಲ್ಲಿ ಅವರು ಆರಿಕಾ ಆಗಿ ಜೀವನ ಸಾರ್ಥಕ ಮಾಡಿಕೊಳ್ಳಬೇಕು ಎಂಬ ಅವರ ಇಚ್ಛೆ ನೆರವೇರಿದೆ.

ಅವರ ಆತ್ಮಕ್ಕೆ ಮಹಾವೀರ ಭಗವಾನರು ಶಾಂತಿ ನೀಡಲಿ ಎಂದು 108 ಶ್ರೀ ಕುಲರತ್ನಭೂಷಣ ಮಹಾರಾಜರು ಆಶೀರ್ವದಿಸಿದರು.

## ವೃತ್ತಿಯಾಚೆಗಿನ ಸೇವೆಯೆ ಪ್ರಶಸ್ತಿಗೆ ಮಾನದಂಡ: ಡಾ. ಗವಿಮಠ

**ಜಮಖಂಡಿ :** ವೃತ್ತಿಯಾಚೆ ಹೆಚ್ಚುವರಿಯಾಗಿ ಸಲ್ಲಿಸಿದ ಸಮಾಜಸೇವೆಯೆ ತಮ್ಮನ್ನು ಪ್ರಶಸ್ತಿಗೆ ಆಯ್ಕೆಮಾಡಿದ ಮಾನದಂಡ ಆಗಿ–ತ್ತು. ವೃತ್ತಿಯ ಆಚೆ ಮಾಡುವ ಸೇವೆಯನ್ನು ಸಮಾಜ ನೋಡುತ್ತಿರುತ್ತದೆ. ಆದಾಗ್ಯೂ, ಆತ್ಮತೃಪ್ತಿಗಾಗಿ ಸೇವೆ ಮಾಡಬೇಕು ಎಂದು ಬಾಲಕರ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಉಪನ್ಯಾಸಕ ಡಾ. ಲಿಂಗಾನಂದ ಗವಿಮಠ ಹೇಳಿದರು.

ಕರ್ನಾಟಕ ಸರ್ಕಾರ ಕೊಡಮಾಡಿದ ರಾಜ್ಯ ಮಟ್ಟದ ಶ್ರೇಷ್ಠ ಉಪನ್ಯಾಸಕ ಪ್ರಶಸ್ತಿಗೆ ಭಾಜನರಾದ ಪ್ರಯುಕ್ತ ರೋಟರಿ ಸಂಸ್ಥೆ ಇಲ್ಲಿನ ವಿಜಯಪುರ ರಸ್ತೆ ಪಕ್ಕದ ರೋಟರಿ ಭವನದಲ್ಲಿ ಶುಕ್ರವಾರ ಸಂಜೆ ಏರ್ಪಡಿಸಿದ್ದ ವಾರದ ಸಭೆಯಲ್ಲಿ ನೀಡಿದ ಸನ್ಮಾನ ಸ್ವೀಕರಿಸಿ ಅವರು ಮಾತನಾಡಿದರು.

ಇಕೋ ಕ್ಲಬ್ ಮೂಲಕ ಪರಿಸರ ಸಂರಕ್ಷಣೆ ಜಾಗೃತಿ ಅಭಿಯಾನ, ಪವಾಡ ರಹಸ್ಯ ಬಯಲು ಕಾರ್ಯಕ್ರಮಗಳ




ಮೂಲಕ ಸಾರ್ವಜನಿಕರಲ್ಲಿ ವೈಜ್ಞಾನಿಕ ಮನೋಭಾವನೆ ಬೆಳೆಸುವುದು, ಇಂಟ್ರ್ಯಾಕ್ಟ್ ಸಂಸ್ಥೆಯ ಅಡಿಯಲ್ಲಿ ಕೈಗೊಂಡ ಪಲ್ಸ್ ಪೋಲಿಯೋ ಜಾಗೃತಿ ಅಭಿಯಾನ, ಸಾರ್ವಜನಿಕರಿಂದ ಪೋಲಿಯೋ ಸಹಾಯಧನ ಸಂಗ್ರಹ, ಲಾತೂರ ಭೂಕಂಪ ಸಂತ್ರಸ್ತರಿಗಾಗಿ ಸಹಾಯಧನ ಸಂಗ್ರಹ ಸೇ–ರಿದಂತೆ ಬಿಡುವಿನ ವೇಳೆಯಲ್ಲಿ ಸಲ್ಲಿಸಿದ ಇತರ ಸಾಮಾಜಿಕ ಚಟುವಟಿಕೆಗಳನ್ನು ಪರಿಗಣಿಸಿ ತಮಗೆ ಪ್ರಶಸ್ತಿ ದೊರೆತಿದೆ ಎಂದರು.

ರೋಟರಿ ಸಂಸ್ಥೆಯ ಅಧ್ಯಕ್ಷ ರಾಜಶೇಖರ ಕೋವಳ್ಳಿ ಅಧ್ಯಕ್ಷತೆ ವಹಿಸಿ ಮಾತನಾಡಿದರು. ರೋಟರಿ ಫೌಂಡೇಷನ್ಗೆ ವೈಯಕ್ತಿಕವಾಗಿ ದೇಣಿಗೆ ನೀಡಿದ ಪ್ರಯುಕ್ತ ರೋಟರಿ ಅಂತಾರಾಷ್ಟ್ರೀಯ ಸಂಸ್ಥೆ ಕೊಡಮಾಡಿದ ಪಾಲ್ ಹ್ಯಾರೀಸ್ ಫೆಲೋಗೆ (ಪಿಎಚ್‌ಎಫ್) ಭಾಜನರಾದ ಸುಮಾರು ಹದಿನೈದು ಜನ ರೋಟರಿ ಸದಸ್ಯರಿಗೆ ರೋಟರಿ ಪಿನ್ ವಿತ–ರಿಸಲಾಯಿತು.

ಪ್ರಶಾಂತ ಗಾತಾಡೆ ರೋಟರಿ ಸಂಸ್ಥೆಯ 'ದಿ ಫೋರ್ ವೇ ಟೆಸ್ಟ್' ಓದಿದರು. ಕೃಷಿ ಅಧಿಕಾರಿ ಮಲ್ಲಪ್ಪ ಬುಜರುಕ ಅತಿಥಿಗಳನ್ನು ಪರಿಚಯಿಸಿದರು. ರೋಟರಿ ಸಂಸ್ಥೆಯ ಮಾಜಿ ಅಧ್ಯಕ್ಷ ಕಿರಣ ದೇಸಾಯಿ ಸೊಗಸಾಗಿ ನಿರೂಪಿಸಿದರು. ಕಾರ್ಯದರ್ಶಿ ಎಂ. ಎಚ್. ಕಡ್ಲಿಮಟ್ಟಿ ವಂದಿಸಿದರು.

## ಕಾಲೇಜು ಅಭಿವೃದ್ಧಿಗೆ ಬದ್ಧ; ಶಾಸಕ ಸಿದ್ದು ಸವದಿ

**ರಬಕವಿ–ಬನಹಟ್ಟಿ:** ತಾಲ್ಲೂಕು ಪ್ರದೇಶದಲ್ಲಿ ಬರುವ ಕಾಲೇಜುಗಳ ಅಭಿವೃದ್ಧಿಗಾಗಿ ಬದ್ಧನಾಗಿರುವೆ. ಮುಂದಿನ ದಿನಗಳಲ್ಲಿ ಕಾಲೇಜು ಅಭಿವೃದ್ಧಿಗೆ ಇನ್ನಷ್ಟು ಮೂಲ ಸೌಕರ್ಯಗಳನ್ನು ಒದಗಿಸಲಾಗುವುದು ಎಂದು ಶಾಸಕ ಸಿದ್ದು ಸವದಿ ತಿಳಸಿದರು.



ಅವರು ಶನಿವಾರ ಇಲ್ಲಿನ ಸರ್ಕಾರಿ ಪ್ರಥ–ಮ ದರ್ಜೆ ಕಾಲೇಜು ಕ್ರೀಡಾ ಮತ್ತು ಸಾಂಸ್ಕೃತಿಕ ಚಟುವಟಿಕೆ ಮತ್ತು ಪ್ರಥಮ ವರ್ಷದ ವಿದ್ಯಾರ್ಥಿಗಳ ಸ್ವಾಗತ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ವಿದ್ಯಾರ್ಥಿಗಳು ತಮ್ಮ ಜೀವನದಲ್ಲಿ ದೇಶಾಭಿಮಾನವನ್ನು ಬೆಳೆಸಿಕೊಳ್ಳಬೇಕು. ದೇಶ ಸೇವೆಗೆ ಮುಂದಾಗಬೇಕು. ಸರ್ಕಾರಿ ಶಾಲಾ ಕಾಲೇಜು ಎಂಬ ಕೀಳರಿಮೆ ವಿದ್ಯಾರ್ಥಿಗಳಲ್ಲಿ ಬೇಡ. ಸರ್ಕಾರಿ ಶಾಲಾ ಕಾಲೇಜುಗಳಲ್ಲಿಯೂ ಕೂಡಾ ಉತ್ತಮ ಶಿಕ್ಷಣ ದೊರೆಯುತ್ತಿದೆ ಎಂದು ಶಾಸಕ ಸಿದ್ದು ಸವದಿ ತಿಳಿಸಿದರು.

ಜಮಖಂಡಿಯ ನಿವೃತ್ತ ಪ್ರಾಚಾರ್ಯ ಸಂಗಮೇಶ ಮಟೋಳ್ಳಿ ಮಾತನಾಡಿ, ವಿದ್ಯಾರ್ಥಿಗಳು ಪಠ್ಯದ ಜೊತೆಗೆ ಪಠ್ಯೇತರ ಚಟುವಟಿಕೆಗಳಲ್ಲಿ ಭಾಗವಹಿಸಬೇಕು. ವಿದ್ಯಾರ್ಥಿಗಳಾಗಿದ್ದಾಗಲೇ ನಾಯಕತ್ವದ ಗುಣಗಳನ್ನು ಬೆಳೆಸಿಕೊಳ್ಳಬೇಕು ಎಂದರು.

ಪ್ರಾಚಾರ್ಯ ಶಿವು ಹಂದಿಗುಂದ ಅಧ್ಯಕ್ಷೀಯ ನುಡಿಗಳನ್ನಾಡುತ್ತ, ಕಾಲೇಜಿನ ಮತ್ತು ವಿದ್ಯಾರ್ಥಿಗಳ ಸರ್ವತೋಮುಖ ಅಭಿವೃದ್ಧಿಗಾಗಿ ಶ್ರಮಿಸುವುದಾಗಿ ತಿಳಿಸಿದರು. ಸಾಂಸ್ಕೃತಿಕ ವಿಭಾಗದ ಸಂಯೋಜಕ ಅಶೋಕ ಕಾಳನ್ನವರ ಮಾತನಾಡಿದರು.

ಕಾರ್ಯಕ್ರಮದಲ್ಲಿ ಚೇತನ ಡಾಗಾ, ಮಹಾವೀರ ಖಿವಟಕೊಪ್ಪ, ಶಾನೂರಕುಮಾರ ಗಾಣಿಗೇರ, ಮಹಾದೇವ ಪೋತರಾಜ, ಮಹಾಂತೇಶ ರೆಡ್ಡಿರೆಟ್ಟಿ, ದೀಪಾ ಜಹಾಗೀರದಾರ, ಮೀನಾಕ್ಷಿ ಜಂಬಗಿ, ಮಂಜುಳಾ ಕೋಳಿ, ಓಂಕಾರ ಯರಗಟ್ಟಿಕರ, ಸೃಷ್ಠಿ ಬಸಪ್ಪಗೋಳ, ಸ್ವಾತಿ ಮಡ್ಡಗೋಳ, ವೈಷ್ಣವಿ ಸುಧಾಳ ಸೇರಿದಂತೆ ಇನ್ನೂ ಅನೇಕರು ಪಾಲ್ಗೊಂಡಿದ್ದರು.

## ಸಮುದಾಯ ಭವನ ಕಾಮಗಾರಿಗೆ ಚಾಲನೆ

**ಮಹಾಲಿಂಗಪುರ :** ಸಮೀಪದ ನಂದಗಾಂವ ಗ್ರಾಮದ ಮಾಧವಾನಂದ ದೇವಸ್ಥಾನದ ಆವರಣದಲ್ಲಿನ ಅಂಬಿಗರ ಚೌಡಯ್ಯ ಸಮುದಾಯ ಭವನದ ಕಾಮಗಾರಿಗೆ ಶುಕ್ರವಾರ ಶಾಸಕ ಸಿದ್ದು ಸವದಿ ಚಾಲನೆ ನೀಡಿದರು.

ನಂತರ ಮಾತನಾಡಿದ ಅವರು, ಗ್ರಾಮಸ್ಥರ ಬೇಡಿಕೆಯಂತೆ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯ 2024–25 ರ ಅನುದಾನದ ಅಡಿಯಲ್ಲಿ ಸುಮಾರು ಆರು ಲಕ್ಷ ರೂ. ಗಳ ವೆಚ್ಚದಲ್ಲಿ ಸಮುದಾಯ ಭವನ ನಿರ್ಮಿಸಲಾಗುತ್ತಿದೆ.

ಗುತ್ತಿಗೆದಾರರು ಯಾರಿಗೂ ಕಮಿಷನ್ ಕೊಡದೇ ಪ್ರಾಮಾಣಿಕವಾಗಿ ಗುಣಮಟ್ಟದ ಕಾಮಗಾರಿಯನ್ನು ಮಾಡಬೇಕು ಎಂದರು.

ಗ್ರಾಮ ಪಂಚಾಯತ್ ಸದಸ್ಯರಾದ ಮಲ್ಲಪ್ಪ ಗುರವ, ಪುಟ್ಟಪ್ಪ ಪೂಜೇರಿ, ಹಿರಿಯರಾದ ವೆಂಕಣ್ಣ ಗೊಬ್ಬರದ, ಯಲ್ಲಪ್ಪ ಉಪ್ಪಾರ, ಸಂಜು ಬಾರಕೋಲ, ರಾಮಚಂದ್ರ ಜಾಧವ, ರಾಮಣ್ಣ ಹಟ್ಟಿ, ಭೈರಪ್ಪ ಜಾಧವ, ಹಣಮಂತ ಬಾರಕೋಲ, ವಿಠ್ಠಲ ಮ್ಯಾಗಾಡಿ, ಪರಶು ಮುಗಳಖೋಡ, ಹಣಮಂತ ಉಪ್ಪಾರ, ಪಾಂಡಪ್ಪ ಬಾರಕೋಲ, ಮಲ್ಲಪ್ಪ ನಿಡಗುಂದಿ, ಅರ್ಜುನ ಸಣ್ಣಕ್ಕಿ, ಸಿದ್ಧಮಲ್ಲ ಹಿರೇಮಠ ಸೇರಿದಂತೆ ಇನ್ನೂ ಹಲವರು ಪಾಲ್ಗೊಂಡಿದ್ದರು.



# ನ್ಯಾಷನಲ್ ಕಾಲೇಜು ಗತವೈಭವಕ್ಕೆ ಮರಳಲಿ: ಸಚಿವ ರಾಮಲಿಂಗಾರೆಡ್ಡಿ ಹಾರೈಕೆ

## ಬಸವನಗುಡಿ ನ್ಯಾಷನಲ್ ಕಾಲೇಜಿನಲ್ಲಿ ಗುರುವಂದನಾ ಕಾರ್ಯಕ್ರಮ | ದಿ ನ್ಯಾಷನಲ್ ಎಜುಕೇಷನ್ ಸೊಸೈಟಿ ಆಫ್ ಕರ್ನಾಟಕ ವತಿಯಿಂದ ಆಯೋಜನೆ

**ಬೆಂಗಳೂರು :** ಲಕ್ಷಾಂತರ ಜನರಿಗೆ ಶಿಕ್ಷಣದ ಮೂಲಕ ಜೀವನ ಕಟ್ಟಿ ಕೊಟ್ಟ ನ್ಯಾಷನಲ್ ಕಾಲೇಜುಗಳು ತಮ್ಮ ಗತವೈಭವಕ್ಕೆ ಮರಳುವಂತಾಗಬೇಕು ಎಂದು ಸಾರಿಗೆ ಸಚಿವ ರಾಮಲಿಂಗಾ ರೆಡ್ಡಿ ಹಾರೈಸಿದ್ದಾರೆ.

ದಿ ನ್ಯಾಷನಲ್ ಎಜುಕೇಷನ್ ಸೊಸೈಟಿ ಆಫ್ ಕರ್ನಾಟಕ ವತಿಯಿಂದ ಬಸವನಗುಡಿ ನ್ಯಾಷನಲ್ ಕಾಲೇಜಿನಲ್ಲಿ ಶನಿವಾರ ಆಯೋಜಿಸಿದ್ದ ಗುರುವಂದನ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, "ನ್ಯಾಷನಲ್ ಕಾಲೇಜಿನಲ್ಲಿ ಶಿಕ್ಷಣದ ಜತೆಗೆ ಸೇವಾ ಮನೋಭಾವವೂ ಇರುವುದ-ರಿಂದ ಇಂತಹ ಕಾಲೇಜುಗಳು ಪ್ರಗತಿಯತ್ತ ಮುಂದುವರಿಯಬೇಕು," ಎಂದರು.

"ಹಿಂದೆ ಬೆಂಗಳೂರಿನಲ್ಲಿ ಹೈಸ್ಕೂಲ್ ಅಥ-ವಾ ಕಾಲೇಜು ಎಂದರೆ ಅದು ನ್ಯಾಷನಲ್ ಕಾಲೇಜು ಎಂಬ ಖ್ಯಾತಿ ಇತ್ತು. ಇಲ್ಲಿ ಸೀಟು ಪಡೆಯುವುದೇ ಕಷ್ಟ ಎನ್ನುವಂತಿತ್ತು. ಆದರೆ, ಇತ್ತೀಚಿನ ವರ್ಷಗಳಲ್ಲಿ ಬೇರೆ ಕಾಲೇಜುಗಳು ಆ ಸ್ಥಾನ ಪಡೆದಿವೆ. ಹೀಗಾಗಿ ನ್ಯಾಷನಲ್ ಕಾಲೇಜು ಎಚ್.ನರಸಿಂಹಯ್ಯ ಅವರ ಕಾಲದಲ್ಲಿದ್ದ ವೈಭವಕ್ಕೆ ಮರಳಬೇಕು. ಅಂತಹ ದಿನಗಳು ಶೀಘ್ರದಲ್ಲೇ ಬರಲಿದೆ," ಎಂದು ಹೇಳಿದರು.

ರಾಜ್ಯ ಮತ್ತು ದೇಶದಲ್ಲಿ ಸಾಕ್ಷರತೆ ಬೆಳೆಯಬೇಕಾದರೆ ಶಿಕ್ಷಕರ ಪಾತ್ರ ಮುಖ್ಯ. ಸ್ವಾತಂತ್ರ್ಯನಂತರ ದೇಶದಲ್ಲಿ ಸಾಕ್ಷರತೆ ಪ್ರಮಾಣ ಹೆಚ್ಚಲು ಶಿಕ್ಷಕರ ಸೇವಾ ಮನೋಭಾವ ಕಾರಣ.

ಎಂದು ಹೇಳಿದ ಸಚಿವ ರಾಮಲಿಂಗಾರೆಡ್ಡಿ, "ಗುರುವಂದನೆ ಎಂದು ಶಿಕ್ಷಕರನ್ನು ಗೌರವಿಸುವುದು ಅದರಲ್ಲೂ ಮುಖ್ಯವಾಗಿ ಈ ಬಾರಿ ಎಲ್ಲಾ 410 ಶಿಕ್ಷಕರಿಗೂ ಗುರುವಂದನೆ ಸಲ್ಲಿಸುತ್ತಿರುವುದು ಅತ್ಯಂತ ಶ್ಲಾಘನೀಯ ಕಾರ್ಯ," ಎಂದು ತಿಳಿಸಿದರು.

"ನಾವು ಶಿಕ್ಷಣ ಪಡೆಯುತ್ತಿದ್ದ ಸಂದರ್ಭದಲ್ಲಿ ಮಕ್ಕಳು ಚೆನ್ನಾಗಿ ಕಲಿಯಲಿ, ಬುದ್ಧಿವಂತರಾಗಲಿ ಎಂಬ ಕಾರಣಕ್ಕೆ ಶಿಕ್ಷಕರು ತಪ್ಪು ಮಾಡಿದವ-ರಿಗೆ ಹೊಡೆಯುತ್ತಿದ್ದರು. ಪೋ.ಕರೇ ಶಿಕ್ಷಕ-ರಿಗೆ ಮನವಿ ಮಾಡಿ ಅವನಮಿಗೆ ನಾಲ್ಕು ಹೊಡೆದು ಬುದ್ಧಿ ಹೇಳಿ ಎನ್ನುತ್ತಿದ್ದರು. ಆದರೆ, ಈಗ ಶಿಕ್ಷಕರು ಆ ರೀತಿ ಮಾಡಿದರೆ ಅವರ ವಿರುದ್ಧ ದೂರು ನೀಡುವ ಪರಿಸ್ಥಿತಿ ಬಂದಿದೆ. ಇಂತಹ ಪರಿಸ್ಥಿತಿಯಲ್ಲೂ ಉತ್ತಮ ರೀತಿಯಲ್ಲಿ ಮಕ್ಕಳನ್ನು ತಿದ್ದಿ ಶಿಕ್ಷಣ ನೀಡುತ್ತಿರುವ ಶಿಕ್ಷಕರಿಗೆ



ಅಭಿನಂದನೆಗಳು," ಎಂದರು.

ವಿಧಾನ ಪರಿಷತ್ ಸದಸ್ಯ ಪುಟ್ಟಣ್ಣ ಮಾತನಾಡಿ, "ಇತ್ತೀಚಿನ ವರ್ಷಗಳಲ್ಲಿ ಶಿಕ್ಷಕರು ಸರ್ಕಾರ, ಸಮಾಜದಿಂದ ನಿರ್ಲಕ್ಷಕ್ಕೊಳಪಡುತ್ತಿದ್ದಾರೆ. ಮಕ್ಕಳ ಪೋಷಕರೂ ಶಿಕ್ಷಕರ ಬಗ್ಗೆ ಗೌರವ ಹೊಂದಿಲ್ಲ. ಯಾವುದೇ ಸರ್ಕಾರ ಅಧಿಕಾರಕ್ಕೆ ಬಂದರೂ ಶಿಕ್ಷಕರನ್ನು ಕಸದ ಬುಟ್ಟಿಯಲ್ಲಿ ತುಂಬುತ್ತದೆ. ಸಮಾಜ ಕೂಡ ಅದೇ ರೀತಿಯಲ್ಲಿ ಆಲೋಚನೆ ಮಾಡುತ್ತಿದೆ. ಮಕ್ಕಳ ಕೈಗೆ ಮೊಬೈಲ್ ಕೊಟ್ಟು ಕೆಲಸದತ್ತ ಗಮನಹರಿಸುವ ಪೋಷಕರು ಎಲ್ಲವನ್ನೂ ಶಿಕ್ಷಕರೇ ಮಾಡಬೇಕು ಎಂದು ಬಯಸುತ್ತಾರೆ.

ಮೂರು ತಾಸು ಪಾಠ ಮಾಡದವನು ಶಿಕ್ಷಣ ತಜ್ಞನಾಗಿ ಶಿಕ್ಷಕರು ಹೇಗಿರಬೇಕು? ಪಠ್ಯ ಹೇಗಿರಬೇಕು ಎಂದು ನಿರ್ಧರಿಸುವಂತಾಗಿದೆ. ಇಂತಹ ಕಷ್ಟದ ಸಂದರ್ಭದಲ್ಲೂ ಕಷ್ಟ ಪಟ್ಟು ಕೆಲಸ ಮಾಡುವ ಗುರುಗಳನ್ನು ಗೌರವಿಸುವುದು ಅತ್ಯಂತ ಸಂತೋಷದ ಸಂಗತಿ," ಎಂದು ಹೇಳಿದರು.

ನ್ಯಾಷನಲ್ ಕಾಲೇಜಿನ ಇತ್ತೀಚಿನ ಪ್ರಗತಿ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದ ಅವರು, "ಎಚ್.ನರಸಿಂಹಯ್ಯ ಅವರು ಇದ್ದಾಗ ಪ್ರತಿವರ್ಷ ಸೀಟ್ ಕೊಡಿಸಲು ಅವರ ಬಳಿ ಬರುತ್ತಿದ್ದೆವು. ಅಂತಹ ದಿನಗಳು ಮರುಕಳಿಸುತ್ತಿದೆ. ಆದ-ರೆ, ಆ ನಿಟ್ಟಿನಲ್ಲಿ ಕೆಲಸ ಮಾಡುವಾಗ ಸಾಕಷ್ಟು ಸಮಸ್ಯೆಗಳು ಎದುರಾಗುತ್ತವೆ. ಅದನ್ನು ಎದುರಿಸಿ ಇದೇ ರೀತಿ ಶಿಕ್ಷಣ ಸಂಸ್ಥೆಯನ್ನು ಮುಂದುವರಿಸಿದರೆ ನ್ಯಾಷನಲ್ ಕಾಲೇಜು ತನ್ನ ಗತ ವೈಭವಕ್ಕೆ ಮರಳುತ್ತದೆ ,"ಎಂದು ವಿಶ್ವಾಸ ವ್ಯಕ್ತಪಡಿಸಿದರು.

ನ್ಯೂಸ್ ಫರ್ಸ್ಟ್ ಕನ್ನಡದ ವ್ಯವಸ್ಥಾಪಕ ನಿರ್ದೇಶಕ ಮತ್ತು ಮುಖ್ಯ ಕಾರ್ಯನಿರ್ವಹಣಾಧಿಕಾರಿ ಆರ್.ರವಿಕುಮಾರ್ ಮಾತನಾಡಿ, "ಯಾವುದೇ ವ್ಯಕ್ತಿಗೆ ವಿದ್ಯೆ, ಜ್ಞಾನ ಮತ್ತು ಸಂಸ್ಕಾರ ಎನ್ನುವುದು ಮುಖ್ಯ. ಈ ಮೂರನ್ನೂ ನೀಡುವ ಗುರುಗಳಿಗೆ ಸಮಾಜ ಅಭಾರಿಯಾಗಿರಬೇಕು. ಆ ನಿಟ್ಟಿನಲ್ಲಿ ನ್ಯಾಷನಲ್ ಕಾಲೇಜು ವತಿಯಿಂದ ಗುರುವಂದನಾ ಕಾರ್ಯಕ್ರಮ ಆಯೋಜಿಸಿರುವುದು ಸ್ತುತ್ಯರ್ಹ," ಎಂದು ಹೇಳಿದರು.

ದಿ ನ್ಯಾಷನಲ್ ಎಜುಕೇಷನ್ ಸೊಸೈಟಿ ಆಫ್ ಕರ್ನಾಟಕದ ಅಧ್ಯಕ್ಷ ಡಾ.ಎಚ್. ಎನ್.ಸುಬ್ರಮಣ್ಯ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು.

ಎಸ್‌ಎಲ್ ವಿ ಹೌಸಿಂಗ್ ಡೆವಲಪ್ ಮೆಂಟ್ ಕಾರ್ಪೋರೇಷನ್ ವ್ಯವಸ್ಥಾಪಕ ನಿರ್ದೇಶಕ ಎಚ್.ನಾಗರಾಜ್, ಸೊಸೈಟಿಯ ಉಪಾಧ್ಯಕ್ಷ ಯಡ್ಲಾಮ್ ಜಿ. ಮಧುಸೂಧನ್, ಕಾರ್ಯದರ್ಶಿಗಳಾದ ಬಿ.ಎಸ್.ಅರುಣ್ ಕುಮಾರ್, ವಿ.ವೆಂಕಟಶಿವಾ ರೆಡ್ಡಿ, ಸಹ ಉಪಾಧ್ಯಕ್ಷ ವಿ.ಮಂಜುನಾಥ್, ಖಜಾಂಚಿ ತಲ್ಲಂ ಆರ್. ದ್ವಾರಕಾನಾಥ್, ಜಂಟಿ ಕಾರ್ಯದರ್ಶಿ ಮತ್ತು ಬಸವನಗುಡಿ ನ್ಯಾಷನಲ್ ಕಾಲೇಜು ಚೇರ್ ಮೆನ್ ಸುಧಾಕರ್ ಎಸ್ತೂರಿ, ಜಯನಗರ ನ್ಯಾಷನಲ್ ಕಾಲೇಜು ಚೇರ್ ಮೆನ್ ಡಾ.ಪಿ. ಎಲ್.ವೆಂಕಟ್ರಾಮ ರೆಡ್ಡಿ, ನ್ಯಾಷನಲ್ ಪಿಯು ಕಾಲೇಜು ಚೇರ್ ಮೆನ್ ರಾಮಮೋಹನ್ ಕೆ. ಎನ್., ಬಸವನಗುಡಿ ನ್ಯಾಷನಲ್ ಹೈಸ್ಕೂಲ್ ಚೇರ್ ಮೆನ್ ಪಾವನ, ಬಸವನಗುಡಿ ನ್ಯಾಷನಲ್ ಹಿರಿಯ ಪ್ರಾಥಮಿಕ ಶಾಲೆ ಚೇರ್ ಮೆನ್ ಡಾ.ರಾಜ್ ಕುಮಾರ್, ದಿ ನ್ಯಾಷನಲ್ ಎಜುಕೇಷನ್ ಸೊಸೈಟಿ ಆಫ್ ಕರ್ನಾಟಕದ ಕಾರ್ಯಕಾರಿ ಸಮಿತಿ ಚೇರ್ ಮೆನ್ ಜಿ.ಎಂ. ರವೀಂದ್ರ ಮತ್ತಿತರರು ಉಪಸ್ಥಿತರಿದ್ದರು.

# ಕಾಡಪ್ಪ ರು. ಸುಟ್ಟಟ್ಟಿ ನಿಧನ



**ಬನಹಟ್ಟಿ :** ಇಲ್ಲಿಯ ನಿವಾಸಿ ಕಾಡಪ್ಪ ರುದ್ರಪ್ಪ ಸುಟ್ಟಟ್ಟಿ ತಮ್ಮ 76 ನೆಯ ವಯಸ್ಸಿನಲ್ಲಿ ಅಕ್ಟೋಬರ್ 19 ರಂದು ಬೆಂಗಳೂರಿನಲ್ಲಿ ನಿಧನರಾದರು. ಮೃತರು ತಮ್ಮ ಹಿಂದೆ ಪತ್ನಿ, ಓರ್ವ ಪುತ್ರ, ಓರ್ವ ಪುತ್ರಿ ಸೇರಿದಂತೆ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ.

# ಹೋಮಿಯೋಪಥಿ ಸರ್ವ ರೋಗಗಳಿಗೂ ರಾಮಬಾಣ: ಡಾ. ವಿಜಯಲಕ್ಷ್ಮೀ ಪಾಟೀಲ



**ಬಾಗಲಕೋಟೆ :** ಹೋಮಿಯೋಪಥಿ ವೈದ್ಯ ಪದ್ಧತಿಯಲ್ಲಿ ಶಿಶುಗಳಿಂದ ವಯೋವೃದ್ಧರವರೆಗಿನ ಸ್ತ್ರಿ – ಪುರುಷರ ರೋಗಗಳಿಗೆ ಯಶಸ್ವಿ ಚಿಕಿತ್ಸೆವಿದೆ ಎಂದು ಬಾಗಲಕೋಟೆಯ ಬಿ.ವ್ಹಿ.ವ್ಹಿ.ಎಸ್. ಹೋಮಿಯೋಪಥಿಕ ವೈದ್ಯಕೀಯ ಮಹಾವಿದ್ಯಾಲಯ ಹಾಗೂ ಆಸ್ಪತ್ರೆ ಪ್ರಾಧ್ಯಾಪಕಿ ಡಾ.ವಿಜಯಲಕ್ಷ್ಮಿ ಪಾಟೀಲ ಅಭಿಪ್ರಾಯ ಪಟ್ಟರು ಅವರು

ಕಿರಸೂರ ಗ್ರಾಮದಲ್ಲಿ ಹಮ್ಮಿಕೊಂಡ ಉಚಿತ ಚಿಕಿತ್ಸಾ ಶಿಬಿರದಲ್ಲಿ ಮಾತನಾಡುತ್ತಾ ಹೋಮಿಯೋಪಥಿ ಸರ್ವರೋಗಗಳಿಗೂ ರಾಮಬಾಣ ವಿದ್ದಂತೆ ಕಾರಣ ಜನರು ಈ ಶಿಬಿರದ ಪ್ರಯೋಜನ ಪಡೆದುಕೊಳ್ಳಬೇಕೆಂದರು. ಗ್ರಾಮದ ಧುರಿಣ-ರಾದ ಮಲ್ಲು ಕಂಬಾರ ಮಾತನಾಡಿ ಬವಿವ ಸಂಘ ಕಾರ್ಯಾಧ್ಯಕ್ಷರಾದ ಡಾ.ವೀರಣ್ಣ ಚರಂತಿಮಠ ರವರ ಸಾರಥ್ಯದಲ್ಲಿ ಈ ಭಾಗದಲ್ಲಿ ಶಿಕ್ಷಣ ಹಾಗೂ ಆರೋಗ್ಯ ಕ್ರಾಂತಿ ಮಾಡುತ್ತಿದೆ ಎಂದರು. ಶಿಬಿರದಲ್ಲಿ ತಜ್ಞ ವೈದ್ಯರಾದ ಡಾ.ಅನುರಾಧಾ ಮಿರಜಕರ, ಡಾ.ಶಮಶಾದ ಅಂಕಲಗಿ.ವೈದ್ಯಾಧಿಕಾರಿ ಡಾ.ಮೇಘಾ ತಳವಾರ ಹಾಗೂ ಕಲಿಕಾ ವೈದ್ಯರು ಭಾಗವಹಿಸಿದ್ದರು.

ಗ್ರಾಮದ ಹಿರಿಯರಾದ

ಡಾ.ಹುಚ್ಚೇಶ ನಿರುಗಲ್ಲ.ಶಿವಪುತ್ರಪ್ಪಾ ದೊಡಮನಿ. ದುಂಡಯ್ಯ ಹಲದುರಮಠ ಉಪಸ್ಥಿತರಿದ್ದರು.

# ಪ್ರಜ್ಞಾವಂತ ಸಮಾಜದ ನಿರ್ಮಾಣಕ್ಕೆ ಆದ್ಯತೆ

**ಬನಹಟ್ಟಿ :** ಇಂದಿನ ದಿನಗಳಲ್ಲಿ ಪ್ರಜ್ಞಾವಂತ ಸಮಾಜವನ್ನು ನಿರ್ಮಾಣ ಮಾಡುವುದು ಶಿಕ್ಷಕರ ಮೇಲಿರುವ ಮಹತ್ತರ ಜವಾಬ್ದಾರಿಯಾಗಿದೆ. ಶಿಕ್ಷಕರು ತಮ್ಮ ಪ್ರತಿಯೊಬ್ಬ ವಿದ್ಯಾರ್ಥಿಗಳ ಬುದ್ಧಿಮತ್ತೆಯನ್ನು ಅರಿತುಕೊಂಡು ಪಾಠಮಾಡಬೇಕೆಂದು ಮುಧೋಳದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಆಂಗ್ಲ ಭಾಷೆಯ ಉಪನ್ಯಾಸಕ ಪರಪ್ಪ ಮಗದುಮ್ಮ ತಿಳಿಸಿದರು.



ಅವರು ಶುಕ್ರವಾರ ಇಲ್ಲಿನ ಜೆಎಸ್ಎಸ್ ಶಿಕ್ಷಣ ಮಹಾವಿದ್ಯಾಲಯದ ವಾರ್ಷಿಕ ಸ್ನೇಹ ಸಮ್ಮೇಳನ ಮತ್ತು ಅಂತಿಮ ವರ್ಷದ ವಿದ್ಯಾರ್ಥಿಗಳ ಬೀಳ್ಕೊಡುವ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದರು.

ಶಿಕ್ಷಕರು ಮೊದಲು ತಮ್ಮ ವೃತ್ತಿಯನ್ನು ಗೌರವಿಸಬೇಕು. ತಾವು ಕಲಿಸುವ ವಿಷಯವನ್ನು ಪ್ರೀತಿಸಬೇಕು. ತಮ್ಮ ವಿಷಯದ ಬಗ್ಗೆ ಆಳವಾದ ಅಧ್ಯಯನ ಮಾಡಬೇಕು. ಒಳ್ಳೆಯ ಪುಸ್ತಕಗಳ ಓದು,

ಉತ್ತಮ ಕೌಶಲ, ಶುದ್ಧವಾದ ಭಾಷೆ ಮತ್ತು ಶ್ರೇಷ್ಠವಾದ ಜ್ಞಾನವನ್ನು ಶಿಕ್ಷಕರಾದವರು ತಮ್ಮಲ್ಲಿ ಅಳವಡಿಸಿಕೊಳ್ಳಬೇಕು ಎಂದು ಮಗದುಮ್ ತಿಳಿಸಿದರು.

ಜಮಖಂಡಿಯ ಓಲೆಮಠದ ಆನಂದ ದೇವರು ಮಾತನಾಡಿ, ವಿದ್ಯಾರ್ಥಿಗಳಲ್ಲಿ ಆತ್ಮಬಲ ಮುಖ್ಯವಾಗಿದೆ. ತಾವು ಆಯ್ದುಕೊಂಡ ಕ್ಷೇತ್ರದಲ್ಲಿ ಶ್ರೇಷ್ಠ ಸಾಧನೆಯನ್ನು ಮಾಡಬೇಕು. ನಮ್ಮ ಜೀವನವು ಬೇರೆಯವರಿಗೆ ಮಾದ-ರಿಯಾಗಬೇಕು ಎಂದರು.

ಕಾರ್ಯಕ್ರಮದಲ್ಲಿ ಜೆಎಸ್ಎಸ್ ಸಂಘದ ಆಡಳಿತ ಮಂಡಳಿಯ ಸದಸ್ಯ ಭೀಮಶಿ ಮಗದುಮ್, ಮಲ್ಲಿಕಾರ್ಜುನ ಬಾಣಕಾರ ಮಾತನಾಡಿದರು.

ಸಂಘದ ಕಾರ್ಯಾಧ್ಯಕ್ಷ ಬಸವಂತ ಜಾಡಗೌಡ ಕಾರ್ಯಕ್ರಮ ಉದ್ಘಾಟಿಸಿದರು.

ವಿ. ಆರ್. ಕುಳ್ಳಿ, ಮಹಾದೇವಿ ಕೊಳಕಿ, ಪಂಡಿತ ಹನಗಂಡಿ, ಬಸವರಾಜ ಭದ್ರನ್ನವರ, ಸುಭಾಸ ಹನಗಂಡಿ, ಪ್ರಾಚಾರ್ಯ ಎಂ. ಎಚ್. ಮಠಪತಿ, ಉಪನ್ಯಾಸಕಿ ಲಕ್ಷ್ಮಿ ನಿಂಬರಗಿ, ವಿದ್ಯಾರ್ಥಿ ಪ್ರತಿನಿಧಿ ಚೈತ್ರಾ ಯಳಕಾರ, ಸುಧೀರ ನಡುವಿನಮನಿ, ಮೇಘಾ ಅಥಣಿ, ಜಯಶ್ರೀ ಕೊಲ್ಲಾಪುರ, ಸಾವಿತ್ರಿ ಮೇಲಗಿರಿ, ಆನಂದ ಮುಗಳಖೋಡ, ಈರಣ್ಣಾ ಬಿಳ್ಳೂರ, ಎಸ್. ಎಲ್. ನೇಸೂರ, ಆನಂದ ಕಾಡದೇವರ ಪಾಲ್ಗೊಂಡಿದ್ದರು.

# ಹಳಿಯಾಳ ಆರ್‌ಸೆಟಿ ಸಂಸ್ಥೆ: ತರಬೇತಿಗೆ ಅರ್ಜಿ ಆಹ್ವಾನ

**ಕೊಪ್ಪಳ :** ಉತ್ತರ ಕನ್ನಡ ಜಿಲ್ಲೆಯ ಹಳಿಯಾಳದ ಕೆನರಾ ಬ್ಯಾಂಕ್ ದೇಶಪಾಂಡೆ ಆರ್‌ಸೆಟಿ ಸಂಸ್ಥೆಯಿಂದ ಉಚಿತವಾಗಿ ಸಿಸಿ ಟಿವಿ ಕ್ಯಾಮೆರಾ ಅಳವಡಿಕೆ, ದುರಸ್ತಿ ಹಾಗೂ ಫಾಸ್ಟ್ ಫುಡ್ ಸ್ಟಾಲ್ ಉದ್ಯಮಿ ತರಬೇತಿಯನ್ನು ನೀಡಲಾಗುತ್ತಿದ್ದು, ಆಸಕ್ತ ಗ್ರಾಮೀಣ ಭಾಗದ ನಿರುದ್ಯೋಗಿ ಯುವಕ ಯುವತಿಯರಿಂದ ಅರ್ಜಿ ಆಹ್ವಾನಿಸಲಾಗಿದೆ.

18 ರಿಂದ 45 ವಯೋಮಾನದ ನಿರುದ್ಯೋಗಿ ಯುವಕ ಯುವತಿರಿಯರಿಗೆ ನವೆಂಬರ್ ತಿಂಗಳಲ್ಲಿ ತರಬೇತಿಯನ್ನು ಆರಂಭಿಸಲಾಗುತ್ತದೆ. ಈ ತರಬೇತಿಯು ಊಟ ಮತ್ತು ವಸತಿಯೊಂದಿಗೆ ಸಂಪೂರ್ಣ ಉಚಿತವಾಗಿದ್ದು, ಸ್ವ-ಉದ್ಯೋಗ ಪ್ರಾರಂಭಿಸಿ, ಸ್ವಾವಲಂಬಿ ಜೀವನ ನಡೆಸಲು ಅನುಕೂಲವಾಗಲಿದೆ. ಮೊದಲು ಬಂದವರಿಗೆ ಹಾಗೂ ಗ್ರಾಮೀಣ ಭಾಗದವರಿಗೆ ಆದ್ಯತೆ ನೀಡಲಾಗುತ್ತದೆ. ತರಬೇತಿಯಲ್ಲಿ ಕೌಶಲ್ಯ, ಸಾಫ್ಟ್ ಸ್ಕಿಲ್ಸ್, ಯೋಗ ತರಬೇತಿ ಹಾಗೂ ಬ್ಯಾಂಕಿನಿಂದ ಸಾಲಪಡೆದು ಸ್ವ-ಉದ್ಯೋಗ ಪ್ರಾರಂಭಿಸಲು ಬೇಕಾಗುವ ಜ್ಞಾನ, ಸರಕಾರಿ ಯೋಜನೆಗಳ ಮತ್ತು ಯೋಜನಾ ವರದಿ ತಯಾರಿಕೆ ಇನ್ನಿತರ ಮಾಹಿತಿಗಳನ್ನು ನೀಡಲಾಗುತ್ತದೆ. ಆಸಕ್ತರು ವೆಬ್‌ಸೈಟ್ www.rseti-haliyal.org ಮೂಲಕ ಆನ್‌ಲೈನ್ ನಲ್ಲಿ ಅರ್ಜಿಯನ್ನು ನವೆಂಬರ್ 5 ರೊಳಗೆ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ನಿರ್ದೇಶಕರು, ಕೆನರಾ ಬ್ಯಾಂಕ್ ದೇಶಪಾಂಡೆ ಆರ್‌ಸೆಟಿ ಸಂಸ್ಥೆ, ಹಳಿಯಾಳ, ಉತ್ತರ ಕನ್ನಡ ಜಿಲ್ಲೆ ವಿಳಾಸಕ್ಕೆ ಅಥವಾ ಮೊ.ಸಂ: 8217236973, 9483485489, 9482188780 ಗೆ ಸಂಪರ್ಕಿಸಬಹುದು ಎಂದು ಸಂಸ್ಥೆಯ ಪ್ರಕಟಣೆ ತಿಳಿಸಿದೆ.

# ಅಪರಿಚಿತ ಮಹಿಳೆಯ ಶವದ ವಾರಸುದಾರರ ಪತ್ತೆಗೆ ಮನವಿ

**ಕೊಪ್ಪಳ :** ಗದಗ ರೈಲ್ವೇ ನಿಲ್ದಾಣದಲ್ಲಿ ಅಕ್ಟೋಬರ್ 16 ರಂದು ಸುಮಾರು 50 ರಿಂದ 55 ವರ್ಷದ ಅಪರಿಚಿತ ಮಹಿಳೆಯು ಯಾವುದೋ ರೈಲು ಗಾಡಿಗೆ ಸಿಕ್ಕು ಮೃತಪಟ್ಟಿದ್ದು, ಮಹಿಳೆಯ ಬಗ್ಗೆ ಯಾವುದೇ ಮಾಹಿತಿ ಲಭ್ಯವಾಗಿರುವುದಿಲ್ಲ.

ಈ ಬಗ್ಗೆ ಗದಗ ರೈಲ್ವೇ ಪೊಲೀಸ್ ಠಾಣೆಯಲ್ಲಿ ಯುಡಿಆರ್ ನಂ: 41/2025 ಕಲಂ: 194 ಬಿ.ಎನ್.ಎಸ್.ಎಸ್. ಅಡಿ ಪ್ರಕರಣ ದಾಖಲಾಗಿದೆ.

**ಮೃತ ಮಹಿಳೆಯ ಚಹರೆ:**

ಮೃತ ಮಹಿಳೆಯು ಅಗಲವಾದ ಮುಖ, ಅಗಲವಾದ ಮೂಗು, ಸಾದಗಪ್ಪು ಮೈಬಣ್ಣ, ಸದೃಢ ಮೈಕಟ್ಟು, ಸುಮಾರು 5.3 ಅಡಿ ಎತ್ತರವಿದ್ದು, ತಲೆಯಲ್ಲಿ ಸುಮಾರು 7–8 ಇಂಚಿನಷ್ಟು ಕಪ್ಪು, ಬಿಳಿ ಮಿಶ್ರಿತ ಕೂದಲು ಇರುತ್ತವೆ.



ಮೃತರ ಮೈಮೇಲೆ ಒಂದು ಕಂದು ಬಣ್ಣದ ಜಂಪರ್,

ಒಂದು ನೀಲಿ ಕಲರಿನ ಲಂಗ, ಒಂದು ಮೆರೂನ್ ಕಲರಿನ ಸೀರೆ ಧರಿಸಿರುತ್ತಾಳೆ.

ಮೇಲ್ಕಂಡ ಚಹರೆ ಪಟ್ಟಿಗೆ ಹೋಲಿಕೆಯಾಗುವಂತಹ ಮಹಿಳೆ ಕಾಣೆಯಾಗಿದ್ದಲ್ಲಿ, ಸಂಬಂಧಿಕರು ಹಾಗೂ ವಾರಸುದಾರರು ಕೂಡಲೇ ಹತ್ತಿರದ ಪೊಲೀಸ್ ಠಾಣೆಗೆ ಅಥವಾ ಗದಗ ರೈಲ್ವೇ ಪೊಲೀಸ್ ಠಾಣೆ **ದೂ.ಸಂ:** 08372–278744, ಮೊ.ಸಂ: 9480802128, **ಇ–ಮೇಲ್:** gadag-rly@ksp.gov.in ಅಥವಾ ರೈಲ್ವೇ ಪೊಲೀಸ್ ಕಂಟ್ರೋಲ್ ರೂಂ: 080–22871291 ಗೆ ಸಂಪರ್ಕಿಸಿ ಮಾಹಿತಿ ನೀಡುವಂತೆ ಗದಗ ರೈಲ್ವೇ ಪೊಲೀಸ್ ಠಾಣೆಯ ಅಧಿಕಾರಿಗಳು ಪ್ರಕಟಣೆಯಲ್ಲಿ ಕೋರಿದ್ದಾರೆ.

# ಅಪರಿಚಿತ ಮಹಿಳೆಯ ಶವದ ವಾರಸುದಾರರ ಪತ್ತೆಗೆ ಮನವಿ

**ಕೊಪ್ಪಳ:** ತಳಕಲ್ ರೈಲ್ವೆ ನಿಲ್ದಾಣದಲ್ಲಿ ಅಕ್ಟೋಬರ್ 14 ರಂದು ಸುಮಾರು 45 ರಿಂದ 50 ವರ್ಷದ ಅಪರಿಚಿತ ಮಹಿಳೆಯು ಯಾವುದೋ ರೈಲು ಗಾಡಿಗೆ ಸಿಕ್ಕು ಮೃತಪಟ್ಟಿದ್ದು, ಮಹಿಳೆಯ ಬಗ್ಗೆ ಯಾವುದೇ ಮಾಹಿತಿ ಲಭ್ಯವಾಗಿರುವುದಿಲ್ಲ.

ಈ ಬಗ್ಗೆ ಗದಗ ರೈಲ್ವೇ ಪೊಲೀಸ್ ಠಾಣೆಯಲ್ಲಿ ಯುಡಿಆರ್ ನಂ: 40/2025 ಕಲಂ: 194 ಬಿ.ಎನ್.ಎಸ್.ಎಸ್. ಅಡಿ ಪ್ರಕರಣ ದಾಖಲಾಗಿದೆ.

ಮೃತ ಮಹಿಳೆಯ ಚಹರೆ:

ಮೃತ ಮಹಿಳೆಯು ಅಗಲವಾದ ಮುಖ, ಅಗಲವಾದ ಮೂಗು, ಸಾದಗೆಂಪು ಮೈಬಣ್ಣ, ಸಾಧಾರಣ ಮೈಕಟ್ಟು,

ಸುಮಾರು 5.1 ಅಡಿ ಎತ್ತರವಿದ್ದು, ತಲೆಯಲ್ಲಿ ಸುಮಾರು 7–8 ಇಂಚಿನಷ್ಟು ಕಪ್ಪು, ಬಿಳಿ ಮಿಶ್ರಿತ ಕೂದಲು ಇರುತ್ತವೆ.



ಮೃತರ ಮೈಮೇಲೆ ಒಂದು ನೀಲಿ ಕಲರಿನ ಬ್ಲೌಸ್,

ಒಂದು ಹಳದಿ ಬಣ್ಣದ ಲಂಗ, ಗುಲಾಬಿ ಬಣ್ಣದ ಸೀರೆ ಧರಿಸಿದ್ದಾರೆ.

ಮೇಲ್ಕಂಡ ಚಹರೆ ಪಟ್ಟಿಗೆ ಹೋಲಿಕೆಯಾಗುವಂತಹ ಮಹಿಳೆ ಕಾಣೆಯಾಗಿದ್ದಲ್ಲಿ,

ಸಂಬಂಧಿಕರು ಹಾಗೂ ವಾರಸುದಾರರು ಕೂಡಲೇ ಹತ್ತಿರದ ಪೊಲೀಸ್ ಠಾಣೆಗೆ ಅಥವಾ ಗದಗ ರೈಲ್ವೇ ಪೊಲೀಸ್ ಠಾಣೆ ದೂ.ಸಂ: 08372–278744,

ಮೊ.ಸಂ: 9480802128, ಇ–ಮೇಲ್: gadagrly@ksp.gov.in ಅಥವಾ ರೈಲ್ವೇ ಪೊಲೀಸ್ ಕಂಟ್ರೋಲ್ ರೂಂ: 080–22871291 ಗೆ ಸಂಪರ್ಕಿಸಿ ಮಾಹಿತಿ ನೀಡುವಂತೆ ಗದಗ ರೈಲ್ವೇ ಪೊಲೀಸ್ ಠಾಣೆ-ಯ ಅಧಿಕಾರಿಗಳು ಪ್ರಕಟಣೆಯಲ್ಲಿ ಕೋರಿದ್ದಾರೆ.

# ಜಿಲ್ಲಾ ಮಟ್ಟದ ಕಾರ್ಯಕಾರಿ ಹಾಗೂ ಜಿಲ್ಲಾ ಟಾಸ್ಕ್ ಫೋರ್ಸ್ ಸಮಿತಿ ಸಭೆ ಅನಿರೀಕ್ಷಿತ ದಾಳಿ, ತಪಾಸಣೆ ಕೈಗೊಂಡು ಬಾಲಕಾರ್ಮಿಕ ಮತ್ತು ಕಿಶೋರ ಕಾರ್ಮಿಕರನ್ನು ರಕ್ಷಿಸಿ: ಜಿಲ್ಲಾಧಿಕಾರಿ ಡಾ. ಸುರೇಶ ಇಟ್ನಾಳ

**ಕೊಪ್ಪಳ :** ಜಿಲ್ಲೆಯಲ್ಲಿ ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆಗಾಗಿ ಅನಿರೀಕ್ಷಿತ ದಾಳಿ, ತಪಾಸಣೆಯನ್ನು ಕೈಗೊಂಡು ಬಾಲಕಾರ್ಮಿಕ ಮತ್ತು ಕಿಶೋರ ಕಾರ್ಮಿಕರನ್ನು ರಕ್ಷಣೆ ಮಾಡುವಂತೆ ಜಿಲ್ಲಾಧಿಕಾರಿ ಡಾ. ಸುರೇಶ ಬಿ. ಇಟ್ನಾಳ ಹೇಳಿದರು.

ಅವರು ಶುಕ್ರವಾರ ಕೊಪ್ಪಳ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬಾಲಕಾರ್ಮಿಕ ಪದ್ಧತಿ ನಿರ್ಮೂಲನಾ ಕ್ರಿಯಾ ಯೋಜನೆಯ ಅನುಷ್ಠಾನ

ಪ್ರಗತಿ ಕುರಿತಂತೆ ಆಯೋಜಿಸಲಾಗಿದ್ದ ಜಿಲ್ಲಾ ಮಟ್ಟದ ಕಾರ್ಯಕಾರಿ ಹಾಗೂ ಜಿಲ್ಲಾ ಟಾಸ್ಕ್ ಫೋರ್ಸ್ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಜಿಲ್ಲೆಯ ನಗರ ಪ್ರದೇಶಗಳಲ್ಲಿನ ಕಿರಾಣಿ, ಬಟ್ಟೆ ಅಂಗಡಿಗಳು, ಹೋಟೆಲ್, ಗ್ಯಾರೇಜ್, ಕೋಳಿ ಫಾರಂ ಹಾಗೂ ಇತರೆ ವಾಣಿಜ್ಯ ಸಂಸ್ಥೆಗಳು ಮತ್ತು ಕಾರ್ಖಾನೆಗಳು, ಕೈಗಾರಿಕೆ ಪ್ರದೇಶಗಳಲ್ಲಿ ಯಾವುದೇ ರೀತಿಯ ಬಾಲಕಾರ್ಮಿಕ ಮತ್ತು ಕಿಶೋರ ಕಾರ್ಮಿಕರನ್ನು ನೇಮಿಸಿಕೊಂಡಿದ್ದಲ್ಲಿ, ಸಂಬಂಧಪಟ್ಟ ಮಾಲೀಕರ ವಿರುದ್ಧ ಪ್ರಕರಣ ದಾಖಲಿಸಬೇಕು. ಈ ಸಂದರ್ಭದಲ್ಲಿ ರಕ್ಷಣೆ-ಯಾದ ಬಾಲಕಾರ್ಮಿಕ ಮತ್ತು ಕಿಶೋರ ಕಾರ್ಮಿಕರಿಗೆ ಸೂಕ್ತ ಪುನರ್ವಸತಿ ಕಲ್ಪಿಸಬೇಕು ಮತ್ತು ಆ ಮಕ್ಕಳನ್ನು ಬಾಲ ಕಾರ್ಮಿಕತೆಗೆ ತಳ್ಳಿದ ಪೋಷಕರಿಗೂ ಸೂಕ್ತ ಸಮಾಲೋಚನೆ ಮೂಲಕ ಮಕ್ಕಳ ಶಿಕ್ಷಣ ಹಾಗೂ ಉತ್ತಮ ಜೀವನ ರೂಪಿಸಲು ಮುಂದಾಗುವಂತೆ ಮನವರಿಕೆ ಮಾಡಿಕೊಡಬೇಕು. ಮಕ್ಕಳ ಪರಿಶೀಲನೆ ಕಾರ್ಯ ಮಾಡುವುದರಿಂದ ಕೂಡ ಮಕ್ಕಳು ಬಾಲಕಾರ್ಮಿಕತೆಗೆ ಒಳಗಾಗುವುದನ್ನು ತಪ್ಪಿಸಬಹುದು ಎಂದರು.

ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆಗಾಗಿ ಎಲ್ಲಾ ರೀತಿಯ ಜನಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕು. ಆಯಾ ವೃತ್ತದ ಕಾರ್ಮಿಕ ನಿರೀಕ್ಷಕರು ಬಾಲಕಾರ್ಮಿಕ ಯೋಜನಾಧಿಕಾರಿಗಳೊಂದಿಗೆ ನಿಯಮಿತವಾಗಿ ಹೆಚ್ಚಿನ ಪ್ರಮಾಣದಲ್ಲಿ ಬಾಲಕಾರ್ಮಿಕ ತಪಾಸಣೆಗೆ ವಿವಿಧ ಪ್ರದೇಶ, ಕಾರ್ಖಾನೆ, ಮಾರುಕಟ್ಟೆಗಳಿಗೆ ಭೇಟಿ ನೀಡಬೇಕು. ಬೇರೆ ಬೇರೆ ರಾಜ್ಯಗಳಿಂದ ಮತ್ತು ವಿವಿಧ ಹಳ್ಳಿಗಳಿಂದ ಕಾರ್ಖಾನೆಗಳಿಗೆ ದುಡಿಯಲು ಬರುವ ಬಡ ಕಾರ್ಮಿಕರು ವಾಸಿಸುವಂತಹ ಸ್ಥಳಗಳಲ್ಲಿ ಹಾಗೂ ವಿಶೇಷವಾಗಿ ಇಟ್ಟಿಗೆ



ಭಟ್ಟಿಗಳಲ್ಲಿ ಕೆಲಸ ಮಾಡುವ ಕಾರ್ಮಿಕರು ವಾಸಿಸುವ ಸ್ಥಳಗಳಿಗೆ ಭೇಟಿ ನೀಡಿ, ಅವರ ಮಕ್ಕಳನ್ನು ಅಂಗನವಾಡಿ ಕೇಂದ್ರ ಮತ್ತು ಸಮೀಪದ ಸರ್ಕಾರಿ ಶಾಲೆಗೆ ಸೇರಿಸಬೇಕು.

ಅವಶ್ಯವಿದ್ದಲ್ಲಿ ಟೆಂಟ್ ಶಾಲೆಗಳನ್ನು ತೆರೆದು ವಲಸೆ ಕಾರ್ಮಿಕರ ಮಕ್ಕಳಿಗೆ ಶಿಕ್ಷಣ ಒದಗಿಸಲು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು ಎಂದು ಸೂಚನೆ ನೀಡಿದರು.

ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಕೊಪ್ಪಳ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ

ಸದಸ್ಯ ಕಾರ್ಯದರ್ಶಿಗಳಾದ ಮಹಾಂತೇಶ ಎಸ್. ದರಗದ್ ಅವರು ಮಾತನಾಡಿ, ರಕ್ಷಿಸಲ್ಪಟ್ಟ ಬಾಲಕಾರ್ಮಿಕರನ್ನು ನಿಯಮಾನುಸಾರವಾಗಿ ಮಕ್ಕಳ ಕಲ್ಯಾಣ ಸಮಿತಿಗೆ ಹಾಜರುಪಡಿಸಿದ ನಂತರದಲ್ಲಿ ಅವರನ್ನು ವಸತಿ ನಿಲಯಗಳಿಗೆ ದಾಖಲಿಸಬೇಕು. ಬಾಲಕಾರ್ಮಿಕರ ಕುಟುಂಬಕ್ಕೆ ಆದಾಯದ ಮೂಲವನ್ನು ಕಂಡುಕೊಳ್ಳುವ ನಿಟ್ಟಿನಲ್ಲಿ ವಿವಿಧ ಇಲಾಖೆಗಳ ಯೋಜನೆಗಳನ್ನು ಪರಿಚಯಿಸಿ, ಸ್ವಾವಲಂಬನೆಯಿಂದ ಜೀವನ ನಡೆಸಲು ಅವರಿಗೆ ಸರ್ಕಾರದ ಸೌಲಭ್ಯಗಳನ್ನು ಒದಗಿಸಿ ಕೊಡಬೇಕು.

ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆಗಾಗಿ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕು. ಇದಕ್ಕಾಗಿ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸಹಕಾರ ಪಡೆದುಕೊಳ್ಳಬಹುದಾಗಿದೆ ಎಂದು ಹೇಳಿದರು.

ಬಾಲಕಾರ್ಮಿಕ ಯೋಜನೆಯ ಯೋಜನಾ ನಿರ್ದೇಶಕ ಬಸವರಾಜ ಹಿರೇಗೌಡ್ರ ಅವರು ಮಾತನಾಡಿ, ಜಿಲ್ಲೆಯಲ್ಲಿ ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆಗೆ ಜಿಲ್ಲಾ ಬಾಲಕಾರ್ಮಿಕ ನಿರ್ಮೂಲನಾ ಹಾಗೂ ಪುನರ್ವಸತಿ ಸೊಸೈಟಿ ವತಿಯಿಂದ ಅಗತ್ಯ ಕಾರ್ಯಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.

ಜಿಲ್ಲಾ ಮತ್ತು ತಾಲೂಕು ಮಟ್ಟದ ಟಾಸ್ಕ್ ಫೋರ್ಸ್ ಸಮಿತಿಗಳಿಂದ ತಪಾಸಣೆ ನಡೆಸಿ ಜಿಲ್ಲೆಯಲ್ಲಿ ಬಾಲಕಾರ್ಮಿಕ, ಕಿಶೋರ ಕಾರ್ಮಿಕರನ್ನು ರಕ್ಷಿಸಲಾಗುತ್ತಿದೆ.

ಕಳೆದ ಮೂರು ವರ್ಷಗಳಲ್ಲಿ 67 ಬಾಲ ಹಾಗೂ ಕಿಶೋರ ಕಾರ್ಮಿಕರನ್ನು ಪತ್ತೆ ಮಾಡಲಾಗಿದ್ದು, 17 ಪ್ರಕರಣಗಳನ್ನು ಸಂಬಂಧಪಟ್ಟ ನ್ಯಾಯಾಲಯಗಳಲ್ಲಿ ದಾಖಲಿಸಲಾಗಿದೆ. ಬಾಲಕಾರ್ಮಿಕರಾಗಿ ಪತ್ತೆಯಾದ 6 ಮಕ್ಕಳಿಗೆ ಮಾಲೀಕರಿಂದ ವಸೂಲಿಯಾದ ದಂಡದ ಮೊತ್ತ ಮತ್ತು ಸರ್ಕಾರದ ವಂತಿಕೆ ಸೇರಿ ಕಾರ್ಪಸ್ ಫಂಡ್ ಮೊತ್ತವನ್ನು ಒಟ್ಟು 35,000 ರೂ.ಗಳನ್ನು ಪ್ರತಿ ಮಗುವಿಗೆ ಜಿಲ್ಲಾಧಿಕಾರಿಗಳು ಹಾಗೂ ಕಾರ್ಮಿಕ ಅಧಿಕಾರಿಗಳ ಮೂಲಕ ಬಾಂಡ್ ಮತ್ತು ಚೆಕ್‌ಗಳನ್ನು ವಿತರಿಸಲಾಗಿದೆ ಎಂದು ಮಾಹಿತಿ ನೀಡಿದರು.

ಜಿಲ್ಲಾ ಕಾರ್ಮಿಕ ಅಧಿಕಾರಿ ಸುಧಾ ಗರಗರವರು ಮಾತನಾಡಿ ಸೊಸೈಟಿಗೆ ರಾಜ್ಯದಿಂದ ಬಂದಿರುವ ಸುತ್ತೋಲೆಗಳ ಕುರಿತು ಮಾಹಿತಿ ನೀಡಿದರು. ಸಭೆಯಲ್ಲಿ ಪದವಿ ಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಜಗದೀಶ್, ಶಾಲಾ ಶಿಕ್ಷಣ ಮತ್ತು ಸಾಕ್ಷರತೆ ಇಲಾಖೆ ಉಪನಿರ್ದೇಶಕ ಸೋಮಶೇಖರಗೌಡ ಪಾಟೀಲ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ಪಿ.ವೈ ಶೆಟ್ಟೆಪ್ಪನವರ್ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

# ಲೋಕಾಯುಕ್ತ ಅರ್ಜಿಗಳನ್ನು ಶೀಘ್ರ ವಿಲೇವಾರಿ ಮಾಡಿ: ಡಾ. ಸುರೇಶ ಇಟ್ನಾಳ



**ಕೊಪ್ಪಳ:** ಕರ್ನಾಟಕ ಲೋಕಾಯುಕ್ತದಲ್ಲಿ ದಾಖಲಾದ ಕೊಪ್ಪಳ ಜಿಲ್ಲೆಯ ವಿವಿಧ ಇಲಾಖೆಗಳಿಗೆ ಸಂಬಂಧಿಸಿದ ದೂರುಗಳ ಅರ್ಜಿಗಳನ್ನು ಬಾಕಿ ಇಟ್ಟುಕೊಳ್ಳದೇ ಅವುಗಳನ್ನು ಶೀಘ್ರದಲ್ಲಿ ವಿಲೇವಾರಿ ಮಾಡುವಂತೆ ಜಿಲ್ಲಾಧಿಕಾರಿ ಡಾ. ಸುರೇಶ ಬಿ. ಇಟ್ನಾಳ ಅವರು ಸಂಬಂಧಪಟ್ಟ ಇಲಾಖೆಗಳ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಅವರು ಶನಿವಾರ ಕೊಪ್ಪಳ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಕರ್ನಾಟಕ ಲೋಕಾಯುಕ್ತದ ಗೌರವಾನ್ವಿತ ಉಪಲೋಕಾಯುಕ್ತರ ಕೊಪ್ಪಳ ಜಿಲ್ಲಾ ಪ್ರವಾಸ ಕಾರ್ಯಕ್ರಮದ ಹಿನ್ನೆಲೆಯಲ್ಲಿ ಕ-ರೆದ ಪೂರ್ವಭಾವಿ ಸಭೆಯಲ್ಲಿ ಅಧ್ಯಕ್ಷತೆವಹಿಸಿ ಮಾತನಾಡಿದರು.

ಗೌರವಾನ್ವಿತ ಉಪಲೋಕಾಯುಕ್ತರಾದ ನ್ಯಾಯಮೂರ್ತಿಬಿ.ವೀರಪ್ಪಅವರುಇದೇಅಕ್ಟೋಬರ್ 29, 30 ಮತ್ತು 31ರಂದು ಕೊಪ್ಪಳ ಜಿಲ್ಲೆಯಲ್ಲಿ ಪ್ರವಾಸ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದು, ಈ ಅವಧಿಯಲ್ಲಿ ಜಿಲ್ಲಾಡಳಿತ ಭವನದ ಆಡಿಟೋರಿಯಂ ಸಭಾಂಗಣದಲ್ಲಿ ಅ.30 ರಂದು ಸಾರ್ವಜನಿಕರಿಂದ ಅಹವಾಲು ಸ್ವೀಕಾರ ಹಾಗೂ ಅ.31 ರಂದು ಲೋಕಾಯುಕ್ತ ವ್ಯಾಪ್ತಿಯಲ್ಲಿ ಬಾಕಿ ಇರುವ ಪ್ರಕರಣಗಳ ವಿಚಾರಣೆಯನ್ನು ನಡೆಸಲಿದ್ದಾರೆ. ಆದ್ದ-ರಿಂದ ಇಲಾಖೆಗಳು ಲೋಕಾಯುಕ್ತಕ್ಕೆ ಸಂಬಂಧಿಸಿದ ಅರ್ಜಿಗಳನ್ನು ಯಾವುದೇ ಕಾರಣಕ್ಕೂ ಬಾಕಿ ಇಟ್ಟುಕೊಳ್ಳಬಾರದು. ಅವುಗಳನ್ನು ತ್ವರಿತವಾಗಿ ವಿಲೇವಾರಿ ಮಾಡಲು ಆಯಾ ಇಲಾಖೆಗಳ ಮುಖ್ಯಸ್ಥರು ಕ್ರಮ ವಹಿಸಬೇಕೆಂದು ಹೇಳಿದರು.

ಉಪಲೋಕಾಯುಕ್ತರ ಕಾರ್ಯಕ್ರಮವನ್ನು ಅಚ್ಚುಕಟ್ಟಾಗಿ ಆಯೋಜಿಸಲು ಸ್ವಾಗತ ಸಮಿತಿ, ಶಿಷ್ಟಾಚಾರ, ವೇದಿಕೆ, ಆಹಾರ, ಸಾರಿಗೆ ಸಮಿತಿ ಸೇರಿದಂತೆ ಈಗಾಗಲೇ ವಿವಿಧ ಸಮಿತಿಗಳನ್ನು ರಚಿಸಿ, ಕಾರ್ಯ ಹಂಚಿಕೆ ಮಾಡಲಾಗಿದೆ. ಅದರಂತೆ ಎಲ್ಲಾ ಸಮಿತಿಗಳು ತಮಗೆ ವಹಿಸಲಾದ ಕರ್ತವ್ಯಗಳನ್ನು ಅತ್ಯಂತ ಜಾವಾಬ್ದಾರಿಯುತವಾಗಿ ನಿರ್ವಹಿಸಬೇಕು. ವಿವಿಧ ಇಲಾಖೆಗಳ ಅಧಿಕಾರಿಗಳು ಪರಸ್ಪರ ಸಮನ್ವಯತೆಯಿಂದ ಕಾರ್ಯನಿರ್ವಹಿಸಬೇಕು. ಸನ್ಮಾನ್ಯರ ಕಾರ್ಯಕ್ರಮದಲ್ಲಿ ಯಾವುದೇ ರೀತಿಯ ಲೋಪವಾಗದಂತೆ ನೋಡಿಕೊಳ್ಳಬೇಕು ಎಂದರು.

ಉಪಲೋಕಾಯುಕ್ತರು ವಿವಿಧ ಸ್ಥಳಗಳಿಗೆ ಭೇಟಿ ಹಾಗೂ ಸಾರ್ವಜನಿಕರಿಂದ ಅಹವಾಲು ಸ್ವೀಕರಿಸಲಿದ್ದು, ಈ ಬಗ್ಗೆ ಜಿಲ್ಲೆಯಾದ್ಯಂತ ಹೆಚ್ಚಿನ ಪ್ರಚಾರ ಮಾಡಬೇಕು.

ಈಗಾಗಲೇ ಸಾರ್ವಜನಿಕ ಸ್ಥಳಗಳಲ್ಲಿ ಮತ್ತು ಧ್ವನಿವರ್ದಕಗಳ ಮೂಲಕ ಬಸ್ ನಿಲ್ದಾಣಗಳಲ್ಲಿ ಅಗತ್ಯ ಜಾಗೃತಿ ಮೂಡಿಸಲಾಗುತ್ತಿದ್ದು, ಇನ್ನೂ ಹೆಚ್ಚಿನ ಪ್ರಚಾರ ಮಾಡಬೇಕು. ಉಪಲೋಕಾಯುಕ್ತರಿಗೆ ಅರ್ಜಿ ಅಥವಾ ದೂರು ಸಲ್ಲಿಸಲು ಬರುವ ಜನರಿಗೆ ವಿಶೇಷ ಕೌಂಟರ್‌ಗಳ ವ್ಯವಸ್ಥೆ ಸೇರಿದಂತೆ ಇತರೆ ಅಗತ್ಯ ಸೌಲಭ್ಯಗಳನ್ನು ಸಾರ್ವಜನಿಕರಿಗೆ ಕಲ್ಪಿಸಿಕೊಡಬೇಕು ಎಂದು ಹೇಳಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವರ್ಣಿತ್ ನೇಗಿ, ಜಿಲ್ಲಾ ಪೊಲೀಸ್ ವರಿ?ಾಧಿಕಾರಿ ಡಾ.ರಾಮ್ ಎಲ್ ಅರಸಿದ್ಧಿ, ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ, ಉಪವಿಭಾಗಾಧಿಕಾರಿ ಕ್ಯಾಪ್ಟನ್ ಮಹೇಶ ಮಾಲಗಿತ್ತಿ, ಕೃಷಿ ಇಲಾಖೆ ಜಂಟಿ ಕೃಷಿ ನಿರ್ದೇಶಕ ಟಿ.ಎಸ್. ರುದ್ರೇಶಪ್ಪ, ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ ಡಿ.ಮಂಜುನಾಥ, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಮಂಜುನಾಥ ಗುಂಡೂರು ಸೇರಿದಂತೆ ಜಿಲ್ಲಾಮಟ್ಟದ ಇತರೆ ವಿವಿಧ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿ ಉಪಸ್ಥಿತರಿದ್ದರು.

# ಕರ್ನಾಟಕ ರಾಜ್ಯೋತ್ಸವ ಆಚರಣೆಗೆ ಅಗತ್ಯ ಸಿದ್ಧತೆ ಮಾಡಿಕೊಳ್ಳಿ: ಜಿಲ್ಲಾಧಿಕಾರಿ ಡಾ. ಸುರೇಶ ಇಟ್ನಾಳ



**ಕೊಪ್ಪಳ :** ನವೆಂಬರ್ 1 ರಂದು ಕೊಪ್ಪಳ ಜಿಲ್ಲೆಯಲ್ಲಿ ಕರ್ನಾಟಕ ರಾಜ್ಯೋತ್ಸವವನ್ನು ಅರ್ಥಪೂರ್ಣ ಹಾಗೂ ಅದ್ದೂರಿಯಾಗಿ ಆಚರಿಸಲು ಸಂಬಂಧಿಸಿದ ಇಲಾಖೆಗಳ ಅಧಿಕಾರಿಗಳು ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳಬೇಕೆಂದು ಜಿಲ್ಲಾಧಿಕಾರಿ ಡಾ. ಸುರೇಶ ಬಿ. ಇಟ್ನಾಳ ಹೇಳಿದರು.

ಅವರು ಶನಿವಾರ ಕೊಪ್ಪಳ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಕರ್ನಾಟಕ ರಾಜ್ಯೋತ್ಸವ ಆಚರಿಸುವ ಕುರಿತು ಕರೆದ ಪೂರ್ವಭಾವಿ ಸಭೆಯಲ್ಲಿ ಅಧ್ಯಕ್ಷತೆವಹಿಸಿ ಮಾತನಾಡಿದರು.

ರಾಜ್ಯೋತ್ಸವದಿನದಂದು ಬೆಳಿಗ್ಗೆ 7 ಗಂಟೆಗೆ ಕೊಪ್ಪಳ ನಗರದ ತಹಶೀಲ್ದಾರರ ಕಚೇರಿ ಆವರಣದಲ್ಲಿ ನಾಡ ದೇವತೆ ತಾಯಿ ಭುವನೇಶ್ವರಿ ದೇವಿಯ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ, ದೇವಿಯ ಭಾವಚಿತ್ರದ ಮೆರವಣಿಗೆ ಅಶೋಕವೃತ್ತ,ಕೇಂದ್ರೀಯ ಬಸ್ ನಿಲ್ದಾಣದ ಮಾರ್ಗವಾಗಿ ಜಿಲ್ಲಾ ಕ್ರೀಡಾಂಗಣದವರೆಗೆ ನಡೆಯಲಿದ್ದು, ಮೆರವಣಿಗೆಯಲ್ಲಿ ವಿವಿಧ ಕಲಾತಂಡಗಳು ಭಾಗವಹಿಸುವಂತೆ ಹಾಗೂ ಮೆರವಣಿಗೆ ಮತ್ತು ಅಂದು ಬೆಳಿಗ್ಗೆ 9 ಗಂಟೆ-ಗೆ ಜಿಲ್ಲಾ ಕ್ರೀಡಾಂಗಣದಲ್ಲಿ ಜರುಗಲಿರುವ ವೇದಿಕೆ ಕಾರ್ಯಕ್ರಮದಲ್ಲಿ ಜಿಲ್ಲಾ ಮಟ್ಟದ ಎಲ್ಲಾ ಇಲಾಖೆಗಳ ಅಧಿಕಾರಿಗಳು, ತಮ್ಮ ಸಿಬ್ಬಂದಿಗಳೊಂದಿಗೆ ಭಾಗವಹಿಸಬೇಕು. ಕಾರ್ಯಕ್ರಮ ದಿನದಂದು ಭುವನೇಶ್ವರಿ ದೇವಿಯ ಭಾವಚಿತ್ರದ ಮೆರವಣಿಗೆ, ವೇದಿಕೆ ಅಲಂಕಾರ, ಪಥಸಂಚಲನ, ಸಾಂಸ್ಕೃತಿಕ ಕಾರ್ಯಕ್ರಮಗಳ ಆಯೋಜನೆಯನ್ನು ಅಚ್ಚುಕಟ್ಟಾಗಿ ನಿರ್ವಹಿಸಬೇಕು. ಕಾರ್ಯಕ್ರಮದಲ್ಲಿ ಮಕ್ಕಳಿಗೆ ಸೂಕ್ತ ಪೂರ್ವ ತರಬೇತಿ ನೀಡಿ, ಶಿಸ್ತುಬದ್ಧ ಪಥಸಂಚಲನ ಮತ್ತು ಅರ್ಥಪೂರ್ಣವಾದ ಸಾಂಸ್ಕೃತಿಕ ಕಾರ್ಯಕ್ರಮ ಏರ್ಪಡಿಸಬೇಕು. ಕನ್ನಡ ನಾಡು, ನುಡಿ, ದೇಶಭಕ್ತಿ ಗೀತೆಗಳಿಗೆ ಮಾತ್ರ ಅವಕಾಶ ನೀಡಬೇಕು. ಈ ನಿಟ್ಟಿನಲ್ಲಿ ರಚಿಸಲ್ಪಟ್ಟ ಸಮಿತಿಗಳು ವ್ಯವಸ್ಥಿತವಾಗಿ ಕಾರ್ಯನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿಗಳು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾ ಕೇಂದ್ರದ ಪ್ರಮುಖ ರಸ್ತೆಗಳು, ವೃತ್ತಗಳ ಸ್ವಚ್ಛತೆ ಮತ್ತು ಅಲಂಕಾರಕ್ಕೆ ಕ್ರಮ ಕೈಗೊಳ್ಳಬೇಕು. ಕ್ರೀಡಾಂಗಣದಲ್ಲಿ ಕುಡಿಯುವ ನೀರಿನ ವ್ಯವಸ್ಥೆಗೆ ನಗರಸಭೆಯಿಂದ ಅಗತ್ಯ ಕ್ರಮ ವಹಿಸಬೇಕು. ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವ ಮಕ್ಕಳಿಗೆ ಕೆ.ಕೆ.ಎಸ್.ಆರ್.ಟಿ.ಸಿ ಅವರಿಂದ ಸೂಕ್ತ ಬಸ್ ಸೌಕರ್ಯ ಒದಗಿಸಬೇಕು. ಪಥಸಂಚಲನ ಮತ್ತು ಅದರ ಪೂರ್ವ ತರಬೇತಿಗೆ ಪಾಲ್ಗೊಳ್ಳುವ ಮಕ್ಕಳಿಗೆ ಹಾಲು ಅಥವಾ ಲಘು ಉಪಹಾರ ವಿತರಣೆಗೆ ಅಕ್ಷರ ದಾಸೋಹ ಮತ್ತು ಸಂಬಂಧಿಸಿದ ಇಲಾಖೆಗಳ ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು. ಕ್ರೀಡಾಂಗಣದಲ್ಲಿ ಆರೋಗ್ಯ ಇಲಾಖೆಯಿಂದ ತುರ್ತು ಪರಿಸ್ಥಿತಿ ನಿರ್ವಹಣೆಗಾಗಿ ಅಗತ್ಯ ಸಿಬ್ಬಂದಿಯೊಂದಿಗೆ ಅಂಬ್ಯುಲೆನ್ಸ್, ಅಗ್ನಿಶಾಮಕ ಇಲಾಖೆಯಿಂದ ಅಗ್ನಿಶಾಮಕ ವಾಹನ ಒದಗಿಸಬೇಕು ಎಂದು ಹೇಳಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವರ್ಣಿತ್ ನೇಗಿ, ಜಿಲ್ಲಾ ಪೊಲೀಸ್ 'ವರಿಷ್ಠಾಧಿಕಾರಿ ಡಾ.ರಾಮ್ ಎಲ್ ಅರಸಿದ್ಧಿ, ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ, ಉಪವಿಭಾಗಾಧಿಕಾರಿ ಕ್ಯಾಪ್ಟನ್ ಮಹೇಶ ಮಾಲಗಿತ್ತಿ, ಕೃಷಿ ಇಲಾಖೆ ಜಂಟಿ ಕೃಷಿ ನಿರ್ದೇಶಕ ಟಿ.ಎಸ್.ರುದ್ರೇಶಪ್ಪ, ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ ಡಿ.ಮಂಜುನಾಥ, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಮಂಜುನಾಥ ಗುಂಡೂರು, ಕನ್ನಡ ಮತ್ತು ಸಂಸಕೃತಿ ಇಲಾಖೆ ಸಹಾಯಕ ನಿರ್ದೇಶಕ ಕರ್ಣಕುಮಾರ ಸೇರಿದಂತೆ ಜಿಲ್ಲಾಮಟ್ಟದ ಇತರೆ ವಿವಿಧ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿ ಉಪಸ್ಥಿತರಿದ್ದರು.

# ಆರ್‌ಎಸ್‌ಎಸ್ ಒಪ್ಪಿಕೊಳ್ಳುವವರು ದೇಶಭಕ್ತರಲ್ಲ, ಕೋಮುವಾದಿಗಳು: ಶಿವರಾಜ ತಂಗಡಗಿ



**ಕೊಪ್ಪಳ:** 'ರಾಷ್ಟ್ರೀಯ ಸ್ವಯಂ ಸೇವಕ ಸಂಘ (ಆರ್‌ಎಸ್‌ಎಸ್)ವನ್ನು ಒಪ್ಪಿಕೊಳ್ಳುವವರು ದೇಶಭಕ್ತರಲ್ಲ. ದೇಶ ವಿರೋಧಿಗಳು' ಎಂದು ಜಿಲ್ಲಾ ಉಸ್ತುವಾರಿ ಸಚಿವ ಶಿವರಾಜ ತಂಗಡಗಿ ಟೀಕಿಸಿದರು.ಆರ್‌ಎಸ್‌ಎಸ್ ಯಾವ ಮೂಲದಿಂದ ದೇಶಭಕ್ತ ಸಂಘ ಅಂತ ಹೇಳುತ್ತೀರಿ ಈ ಸಂಘಟನೆ ಮಹಾತ್ಮ ಗಾಂಧಿ,ಬುದ್ಧ,ಬಸವಣ್ಣಹಾಗೂಸಂವಿಧಾನ ರಚಿಸಿದ ಬಿ.ಆರ್. ಅಂಬೇಡ್ಕರ್ ಅವರನ್ನು ಒಪ್ಪಿಕೊಳ್ಳುವುದೇ ಇಲ್ಲ. ರಾಷ್ಟ್ರಧ್ವಜ, ರಾಷ್ಟ್ರಗೀತೆ, ಸಂವಿಧಾನವನ್ನೂ ಈ ಸಂಘ ಗೌರವಿಸುವುದಿಲ್ಲ.ಇವರನ್ನುಹೇಗೆದೇಶಭಕ್ತ ಸಂಘಟನೆ ಎಂದು ಕರೆಯಬೇಕು' ಎಂದು ಶನಿವಾರ ಸುದ್ದಿಗೋಷ್ಠಿಯಲ್ಲಿ ಪ್ರಶ್ನಿಸಿದರು.

ಆರ್‌ಎಸ್‌ಎಸ್‌ನವರು ರಾಷ್ಟ್ರಗೀತೆ ಹಾಡುವುದಿಲ್ಲ, 'ನಮಸ್ತೇ ಸದಾ ವತ್ಸಲೇ' ಹಾಡುತ್ತಾರೆ. ಇವರು ದೇಶಭಕ್ತರಲ್ಲ, ಕೋಮುವಾದಿಗಳು. ಇಂಥ ಸಂಸ್ಥೆಗೆ ಸಾರ್ವಜನಿಕ ಸ್ಥಳಗಳಲ್ಲಿ ಕಾರ್ಯಕ್ರಮಕ್ಕೆ ಅನುಮತಿ ಕೊಡಬಾರದು. ಸರ್ಕಾರ ಅಮಾನತು ಮಾಡಿಲ್ಲ. ಆದರೆ ಯಾವುದೇ ಸಂಘಟನೆ ಸರ್ಕಾರಿ ಜಾಗದಲ್ಲಿ ಸಾರ್ವಜನಿಕ ಕಾರ್ಯಕ್ರಮ ಮಾಡಲು ಅನುಮತಿ ಪಡೆದುಕೊಳ್ಳುವುದು ಕಡ್ಡಾಯವಾಗಿದೆ' ಎಂದು ಹೇಳಿದರು.

ಸುಧಾ ಹಾಗೂ ನಾರಾಯಣ ಮೂರ್ತಿಯವರು ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆಗೆ ಮಾಹಿತಿ ನೀಡಿಲ್ಲ ಎನ್ನುವುದನ್ನು ಅವರೇ ಬಹಿರಂಗಪಡಿಸಿದ್ದಾರೆ. ಬ್ರಾಹ್ಮಣ ಸಮುದಾಯದಲ್ಲಿಯೂ ಬಡವರು ಇದ್ದಾರೆ. ಎಲ್ಲರೂ ಪ್ರಲ್ಹಾದ ಜೋಶಿ, ತೇಜಸ್ವಿ ಸೂರ್ಯ ಅವರಂತೆಯೇ ಶ್ರೀಮಂತರೇ ಇದು ಆರ್ಥಿಕ?ಸಾಮಾಜಿಕ ಸಮೀಕ್ಷೆ. ಬಡವರು ಸರ್ಕಾರದ ಸವಲತ್ತು ಪಡೆಯಬಾರದು ಎನ್ನುವ ಮನಃಸ್ಥಿತಿ ಅವರದ್ದು' ಎಂದು ಟೀಕಿಸಿದರು.

# ಜಿಲ್ಲಾಡಳಿತ ವತಿಯಿಂದ ನ.1 ರಂದು ಕನ್ನಡ ರಾಜ್ಯೋತ್ಸವವನ್ನು ಹಬ್ಬದಂತೆ ಅದ್ದೂರಿಯಾಗಿ ಆಚರಿಸಲು ಅಗತ್ಯ ಸಿದ್ಧತೆ ಕೈಗೊಳ್ಳಿ –ಜಿಲ್ಲಾಧಿಕಾರಿ ಡಾ.ಆನಂದ.ಕೆ

**ವಿಜಯಪುರ:** ಕನ್ನಡ ರಾಜ್ಯೋತ್ಸವದ ಆಚರಣೆ ಹಬ್ಬದ ವಾತಾವರಣದ ರೀತಿಯಲ್ಲಿ, ಅದ್ದೂರಿಯಾಗಿ ಮತ್ತು ಅರ್ಥಪೂರ್ಣವಾಗಿ ಆಚರಿಸಲು ನಿರ್ಧರಿಸಲಾಗಿದ್ದು, ಆಯಾ ಇಲಾಖೆ ಅಧಿಕಾರಿಗಳು ಈ ಕಾರ್ಯಕ್ರಮವನ್ನು ಅತ್ಯಂತಅಚ್ಚುಕಟ್ಟಾಗಿನಿರ್ವಹಿಸಲುಅಗತ್ಯಸಿದ್ಧತೆ ಮಾಡಿಕೊಳ್ಳುವಂತೆ ಜಿಲ್ಲಾಧಿಕಾರಿ ಡಾ.ಆನಂದ ಕೆ ಅವರು ಸೂಚಿಸಿದರು.ಅವರು ಶನಿವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಈ ಬಾರಿಯ ಕರ್ನಾಟಕ ರಾಜ್ಯೋತ್ಸವ ಆಚರಣೆ ಕುರಿತು ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ, ಮಾತನಾಡಿದರು.ಕನ್ನಡ ನಾಡು, ನುಡಿಯ ಬಗ್ಗೆ ಜಾಗೃತಿ ಮೂಡಿಸುವಲ್ಲಿ ರಾಜ್ಯೋತ್ಸವ ಕಾರ್ಯಕ್ರಮವನ್ನು ವ್ಯವಸ್ಥಿತವಾಗಿ ನಿರ್ವಹಿಸಿ,ಕನ್ನಡಮಯ ಹಬ್ಬದ ವಾತಾವರಣ ಇರುವಂತೆ ಅಗತ್ಯ ಯೋಜನೆ ರೂಪಿಸುವಂತೆಯೂ, ಕನ್ನಡದ ಶ್ರೀಮಂತ ಪರಂಪರೆ ಕಲೆ ಹಾಗೂ ಸಂಸ್ಕೃತಿ ಪ್ರತಿಬಿಂಬಿಸುವಸಾಂಸ್ಕೃತಿಕಕಾರ್ಯಕ್ರಮಗಳಲ್ಲಿ ಸಮ್ಮಿಳಿತಗೊಳಿಸಬೇಕು. ಶ್ರೀಮಂತ ಸಂಸ್ಕೃತಿಯ ಪರಿಚಯ ಮಾಡಿಕೊಡುವ ಕಲಾ ಪ್ರಕಾರಗಳನ್ನು ಆಯೋಜಿಸಲು ಯೋಜನೆ ರೂಪಿಸಿಕೊಳ್ಳುವಂತೆಯೂ, ರಾಜ್ಯೋತ್ಸವ ಕಾರ್ಯಕ್ರಮದ ಮೂಲಕ ನಾಡಿನ ಕಲೆ,ಸಂಸ್ಕೃತಿ, ಇತಿಹಾಸ, ಸಾಹಿತ್ಯದ ಹಿರಿಮೆ-ಗರಿಮೆ ಕುರಿತು ವಿದ್ಯಾರ್ಥಿಗಳಿಗೆ ಮತ್ತು ಸಾರ್ವಜನಿಕರಿಗೆ ತಿಳಿಸಿಕೊಡುವ ನಿಟ್ಟಿನಲ್ಲಿ ಕಾರ್ಯಕ್ರಮ ರೂಪಿಸಬೇಕು. ಈ ನಿಟ್ಟಿನಲ್ಲಿ ಸಾಂಸ್ಕೃತಿಕವಾಗಿ ಕಾರ್ಯಕ್ರಮಗಳನ್ನು ಆಯೋಜಿಸಬೇಕು ಎಂದು ಹೇಳಿದರು.




ಕಾರ್ಯಕ್ರಮವು ನಗರದ ಡಾ.ಬಿ.ಆರ್. ಅಂಬೇಡ್ಕರ್ ಜಿಲ್ಲಾ ಕ್ರೀಡಾಂಗಣದಲ್ಲಿ ವ್ಯವಸ್ಥಿತವಾಗಿ ಹಮ್ಮಿಕೊಳ್ಳಬೇಕು. ಅಂದು ಬೆಳಿಗ್ಗೆ 9ಗಂಟೆಗೆ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲ ಸೌಲಭ್ಯ ಅಭಿವೃದ್ಧಿ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಿಂದ ಧ್ವಜಾರೋಹಣ ನೆರವೇರಲಿದೆ. ಕಾರ್ಯಕ್ರಮಕ್ಕೆ ಸಬಂಧಿಸಿದಂತೆ ಅಧಿಕಾರಿಗಳಿಗೆ ವಹಿಸಿದ್ದ ಎಲ್ಲ ಕೆಲಸ ಕಾರ್ಯಗಳನ್ನು ವ್ಯವಸ್ಥಿತವಾಗಿ ಕೈಗೊಳ್ಳಬೇಕು. ಅಂದು ಬೆಳಿಗ್ಗೆ 7.30ಕ್ಕೆ ನಗರದ ಶ್ರೀ ಸಿದ್ದೇಶ್ವರ ದೇವಸ್ಥಾನದಿಂದ ಭುವನೇಶ್ವರ ದೇವಿಯ ಭಾವಚಿತ್ರದ ಭವ್ಯ ಮೆರವಣಿಗೆಯನ್ನು ವಿವಿಧ ಇಲಾಖೆಗಳು ನಿರ್ಮಿಸಿರುವ ಸ್ಥಬ್ಧ ಚಿತ್ರಗಳು, ಕಲಾ ತಂಡದೊಂದಿಗೆ ನಗರದ ವಿವಿಧ ವೃತ್ತಗಳ ಮೂಲಕಜಿಲ್ಲಾಕ್ರೀಡಾಂಗಣಕ್ಕೆಆಗಮಿಸುವುದು. ವೇದಿಕೆ ಸಿದ್ಧತೆ, ಶಿಷ್ಟಾಚಾರದಂತೆ ಅತಿಥಿ ಗಣ್ಯರನ್ನು ಆಹ್ವಾನಿಸುವುದು. ಆಹ್ವಾನ ಪತ್ರಿ-ಕೆಯ ಮುದ್ರಣ ಹಾಗೂ ವಿತರಣೆ, ಆಸನದ ವ್ಯವಸ್ಥೆ, ಕುಡಿಯುವ ನೀರಿನ ವ್ಯವಸ್ಥೆ ಹಾಗೂ ಸ್ವಚ್ಛತೆ ಕಾರ್ಯ ಕೈಗೊಳ್ಳಲು ನಿರ್ದೇಶಿಸಿದರು. ನಗರದ ಎಲ್ಲಾ ಮುಖ್ಯ ವೃತ್ತಗಳ ಸ್ವಚ್ಛತೆ ಹಾಗೂ ವಿದ್ಯುತ್ ದೀಪಾಲಂಕಾರ ಕೈಗೊಳ್ಳುವ ಜವಾಬ್ದಾರಿಯನ್ನು ನಿರ್ವಹಿಸುವುದು, ಇನ್ನಿತರ ಕಾರ್ಯಕ್ರಮಗಳ ಕುರಿತು ಅಧಿಕಾರಿಗಳು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು. ಜಿಲ್ಲಾಮಟ್ಟದ ಅಧಿಕಾರಿಗಳು, ಸಿಬ್ಬಂದಿಗಳು ಕಡ್ಡಾಯವಾಗಿ ಕಾರ್ಯಕ್ರಮದಲ್ಲಿ ಭಾಗವಹಿಸಬೇಕು.

ಈಗಾಗಲೇ ಸಮಿತಿ ರಚಿಸಿದ್ದು, ವಿವಿಧ ಸಮಿತಿ ಅಧಿಕಾರಿಗಳು ಕಾರ್ಯಕ್ರಮ ಅಚ್ಚುಕಟ್ಟಾಗಿ ನಿರ್ವಹಿಸಬೇಕು. ವೈದ್ಯಕೀಯ ವ್ಯವಸ್ಥೆ ಹಾಗೂ ವೈದ್ಯಕೀಯ ತಂಡದೊಂದಿಗೆ ಆಂಬ್ಯುಲೆನ್ಸ್, ಅಗ್ನಿ ನಿರೋಧಕ ವಾಹನದ ವ್ಯವಸ್ಥೆ ಮಾಡಿಕೊಳ್ಳಬೇಕು. ಪೊಲೀಸ್ ಪಡೆ, ಹೊಂಗಾರ್ಡ್ಸ್, ಸೈನಿಕ ಶಾಲೆಯ ವಿದ್ಯಾರ್ಥಿಗಳು, ಎನ್ಸಿಸಿ ವಿದ್ಯಾರ್ಥಿಗಳು, ಅಗ್ನಿ ಶಾಮಕ ದಳ, ಅರಣ್ಯ ಇಲಾಖೆ, ಸ್ಕೌಟ್ಸ್ ಮತ್ತು ಗೈಡ್ಸ್ ವಿದ್ಯಾರ್ಥಿಗಳು ಒಳಗೊಂಡಂತೆ ವಿವಿಧ ತಂಡಗಳು ಕವಾಯತಿನಲ್ಲಿ ಪಾಲ್ಗೊಂಡು ಉತ್ತಮ ರೀತಿಯಲ್ಲಿ ಪ್ರದರ್ಶನ ನೀಡುವಂತೆ ಸಕಲ ಸಿದ್ಧತೆ ಮಾಡಿಕೊಳ್ಳಬೇಕು ಎಂದು ಸೂಚಿಸಿದರು.

ಕಂದಗಲ್ ಶ್ರೀ ಹನುಮಂತರಾಯ ರಂಗಮಂದಿರದಲ್ಲಿ ಸಂಜೆ ಕನ್ನಡ ನಾಡು ನುಡಿ ಹಾಗೂ ನಾಡಿನ ವೈವಿಧ್ಯತೆ ಪ್ರತಿಬಿಂಬಿಸುವ ಸಾಂಸ್ಕೃತಿಕ ಕಾರ್ಯಕ್ರಮ ಅತ್ಯಂತ ವ್ಯವಸ್ಥಿತವಾಗಿ ಆಯೋಜಿಸುವಂತೆಯೂ, ಭಾಗವಹಿಸುವ ವಿದ್ಯಾರ್ಥಿಗಳನ್ನು ಪ್ರೋತ್ಸಾಹಿಸಲು ಪ್ರಮಾಣ ವಿತರಿಸುವಂತೆ ಅವರು ಸೂಚನೆ ನೀಡಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳಾದ ರಿಷಿ ಆನಂದ, ಅಪರ ಜಿಲ್ಲಾಧಿಕಾರಿ ಸೋಮಲಿಂಗ ಗೆಣ್ಣೂರ, ಪಾಲಿಕೆ ಆಯುಕ್ತ ವಿಜಯ ಮೆಕ್ಕಳಿಕಿ, ಹೆಸ್ಕಾಂ ಅಧೀಕ್ಷಕ ಅಭಿಯಂತರರಾದ ಸಿದ್ದಪ್ಪ ಬಿಂಜಗೇರಿ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರಾದ ಬದ್ರುದ್ದಿನ್ ಸೌದಾಗರ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರಾದ ಕೆ.ಕೆ. ಚವ್ಹಾಣ, ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕ ಮಹೇಶ ಪೋತದಾರ, ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರ ವೀರಯ್ಯ ಸಾಲಿಮಠ, ಸಾರಿಗೆ ಇಲಾಖೆಯ ಪ್ರಾದೇಶಿಕ ಸಾರಿಗೆ ಅಧಿಕಾರಿ ವಸೀಂ ಬಾಬಾ ಮುದ್ದೇಬಿಹಾಳ, ಕ್ರೀಡಾಧಿಕಾರಿ ರಾಜಶೇಖರ ದೈವಾಡಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಸಂತೋಷ ಭೋವಿ, ಕರ್ನಾಟಕ ರಕ್ಷಣಾ ವೇದಿಕೆಯ ಜಿಲ್ಲಾಧ್ಯಕ್ಷರಾದ ಎಂ.ಸಿ.ಮುಲ್ಲಾ, ಅಡಿವೆಪ್ಪ ಸಾಲಗಲ್, ಫಯಾಜ್ ಕಲಾದಗಿ, ರಾವಜಿ, ದೇವೆಂದ್ರ ಮಿರೆಕರ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು, ವಿವಿಧ ಸಂಘ ಸಂಸ್ಥೆಗಳ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ಎಸ್ಸಿಪಿ:ಟಿಎಸ್ಪಿ ಕಾಯ್ದೆ ಗಂಭೀರತೆ ಅರಿತುಕೊಂಡು ಕಾರ್ಯನಿರ್ವಹಿಸುವಂತೆ–ಜಿಲ್ಲಾಧಿಕಾರಿ ಡಾ.ಆನಂದ ಕೆ. ಸೂಚನೆ

**ವಿಜಯಪುರ :** ಎಸ್ಸಿಪಿ–ಟಿಎಸ್ಪಿ ಇದೊಂದು ಕಾಯ್ದೆಯಾಗಿದೆ. ಈ ಕಾಯ್ದೆಯಡಿ ಅರ್ಹ ಫಲಾನುಭವಿಗಳಿಗೆ ನಿಗದಿತ ಅವಧಿಯಲ್ಲಿ ಸೌಲಭ್ಯ ದೊರಕಿಸಲು ಅಧಿಕಾರಿಗಳು ಈ ಕಾಯ್ದೆಯ ಗಂಭೀರತೆಯನ್ನು ಅರಿತುಕೊಂಡು ಜವಾಬ್ದಾರಿಯಿಂದ ಕಾರ್ಯನಿರ್ವಹಿಸುವಂತೆ ಜಿಲ್ಲಾಧಿಕಾರಿ ಡಾ.ಆನಂದ ಕೆ. ಅವರು ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶನಿವಾರ ಜರುಗಿದ 2025–26ನೇ ಸಾಲಿನ ವಿಶೇಷ ಘಟಕ ಯೋಜನೆ ಹಾಗೂ ಗಿರಿಜನ ಉಪಯೋಜನೆಯ ಕೇಂದ್ರ, ರಾಜ್ಯ ಹಾಗೂ ಜಿಲ್ಲಾ ವಲಯ ಯೋಜನೆ ಕಾರ್ಯಕ್ರಮಗಳ ಇಲಾಖಾವಾರು ಸೆಪ್ಟಂಬರ್ 2025ರ ಮಾಹೆಯ ಅಂತ್ಯದವರೆಗೆ ಸಾಧಿಸಿದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಎಸ್ಸಿಪಿ–ಟಿಎಸ್ಪಿ ಕಾಯ್ದೆ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಿ ಫಲಾನುಭವಿಗಳಿಗೆ ಸೌಲಭ್ಯ ದೊರಕಿಸಬೇಕು. ಸಂಬಂಧಿಸಿದ ಇಲಾಖೆಗಳು ಈ ಎಸ್ಸಿಪಿ–ಟಿಎಸ್ಪಿ ಕಾಯ್ದೆ ಸಮರ್ಪಕವಾಗಿ ಅನುಷ್ಠಾನಗೊಳಿಸದೇ ಇದ್ದ ಸಂದರ್ಭದಲ್ಲಿ ಶೋಕಾಸ್ ನೋಟಿಸ್ ನೀಡಲು ಹಾಗೂ ನಿಗದಿತ ಅವಧಿಯಲ್ಲಿ ಎಸ್ಸಿಪಿ ಟಿಎಸ್ಪಿ ಅನುದಾನ ವೆಚ್ಚ ಮಾಡದೇ ಬಾಕಿ ಉಳಿಸಿಕೊಂಡಲ್ಲಿ ಕ್ರಮ ಜರುಗಿಸಲು ಅವಕಾಶವಿರುವುದರಿಂದ ಇದಕ್ಕೆ ಆಸ್ಪದ ನೀಡದೇ, ಕಾಯ್ದೆಯ ಗಂಭೀರತೆಯನ್ನು ಅರಿತುಕೊಂಡು, ಜವಾಬ್ದಾರಿಯುತವಾಗಿ ಕಾರ್ಯನಿರ್ವಹಿಸಿ, ಸಮರ್ಪಕವಾಗಿ ಅನುಷ್ಠಾನಗೊಳಿಸಿ ಅರ್ಹರಿಗೆ ಸೌಲಭ್ಯ ದೊರಕಿಸಲು ಅನುದಾನ ವೆಚ್ಚ ಮಾಡುವಂತೆ ಅವರು ಸೂಚನೆ ನೀಡಿದರು.

ಜಿಲ್ಲಾ ಹಾಗೂ ತಾಲೂಕಾ ಮಟ್ಟದಲ್ಲಿ ನಿರಂತರವಾಗಿ ಸಭೆಗಳನ್ನು ನಡೆಸಿ, ಪರಿಶೀಲನೆ ನಡೆಸಬೇಕು. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಕಾಲಕಾಲಕ್ಕೆ, ಅತ್ಯಂತ ಪ್ರಮುಖ ಇಲಾಖೆಗಳಾದ ಶಿಕ್ಷಣ ಇಲಾಖೆ, ಕೃಷಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಗಳ ಪ್ರಗತಿ ಪರಿಶೀಲನೆ ನಡೆಸಬೇಕು. ಎಸ್ಸಿಪಿ–ಟಿಎಸ್ಪಿ ಯೋಜನೆಗಳು ಲಾಭ ಫಲಾನುಭವಿಗಳಿಗೆ ತಲುಪುತ್ತಿರುವ ಕುರಿತು ಪರಿಶೀಲನೆ ನಡೆಸಬೇಕ, ಈ ಯೋಜನೆಯಡಿ ಬಿಡುಗಡೆಯಾದ ಅನುದಾನ ಲ್ಯಾಪ್ಸ್ವಾಗದಂತೆ ಎಚ್ಚರಿಕೆ ವಹಿಸುವಂತೆ ಅವರು ಸೂಚನೆ ನೀಡಿದರು.



ಈ ಯೋಜನೆಯ ವಿವಿಧ ಲೆಕ್ಕಶೀರ್ಷಿಕೆಯಡಿ ಬಿಡುಗಡೆಯಾಗುವ ಅನುದಾನಕ್ಕೆ ನಿಗದಿತ ಕಾಲಾವಧಿಯಲ್ಲಿ ಕ್ರೀಯಾಯೋಜನೆ ಸಿದ್ಧಪಡಿಸಿಕೊಂಡು ಸಂಬಂಧಿಸಿದ ಇಲಾಖಾ ಮುಖ್ಯಸ್ಥರ ಅನುಮೋದನೆ ಪಡೆದು-ಕೊಂಡು ಫಲಾನುಭವಿಗಳ ಆಯ್ಕೆ ಮಾಡಿ, ಫಲಾನುಭವಿಗಳಿಗೆ ಲಾಭ ದೊರಕಿಸುವ ಮೂಲಕ ಶೇಕಡಾವಾರು ಪ್ರಗತಿ ಸಾಧಿಸುವಂತೆ ಅವರು ಸೂಚನೆ ನೀಡಿದರು.

ಅಧಿಕಾರಿಗಳು ಎಸ್ಸಿಪಿ–ಟಿಎಸ್ಪಿ ಆರ್ಥಿಕ ಹಾಗೂ ಭೌತಿಕ ಸಾಧನೆಯ ನಿಖರವಾಗಿ ಮಾಹಿತಿ ಸಲ್ಲಿಸಬೇಕು. ಇಲಾಖಾವಾರು ಯೋಜನೆಯ ಮಾಹಿತಿ ಒದಗಿಸಬೇಕು.ಕೇಂದ್ರ, ರಾಜ್ಯ, ಜಿಲ್ಲಾ ಪಂಚಾಯತ್ ಸೇರಿದಂತೆ ಆಯಾ ವಲಯವಾರು ಪ್ರತ್ಯೇಕವಾಗಿ ಮಾಹಿತಿ ಒದಗಿಸಬೇಕು.ಎಸ್ಸಿಪಿ–ಟಿಎಸ್ಪಿಯೋಜನೆಯಡಿ ಸೌಲಭ್ಯ ಒದಗಿಸಿರುವ ಕುರಿತು ನಿಖರವಾಗಿ ಮಾಹಿತಿ ಹಾಗೂ ಬಾಕಿ ಉಳಿಯಲು ಇರುವ ಕಾರಣವನ್ನು ನಿಖರವಾಗಿ ಒದಗಿಸಬೇಕು.

ಅನುದಾನ ವೆಚ್ಚ ಮಾಡದೆ ಬಾಕಿ ಉಳಿಸಿಕೊಂಡಿರುವ ಕುರಿತು ಸಬೂಬೂ ನೀಡದೆ, ಬಿಡುಗಡೆಯಾದ ಅನುದಾನ, ವೆಚ್ಚ ಮಾಡಿದ ಅನುದಾನಕ್ಕೆ ಪೂರಕ ದಾಖಲೆಗಳನ್ನು ಸಲ್ಲಿಸುವಂತೆ ಅವರು ಸೂಚನೆ ನೀಡಿದರು.

ಭೌತಿಕ ಮತ್ತು ಆರ್ಥಿಕ ಪ್ರಗತಿ ಸಾಧಿಸದ ಅಧಿಕಾರಿಗಳ ವಿರುದ್ಧ ನಿರ್ದಾಕ್ಷಿಣ್ಯವಾಗಿ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಸಿದ ಅವರು, ಫಲಾನುಭವಿ ಆಯ್ಕೆ,

ಸೌಲಭ್ಯ ದೊರಕಿಸುವುದು ಸೇರಿದಂತೆ ಎಲ್ಲ ಪ್ರಕ್ರಿಯೆಗಳನ್ನು ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸುವಂತೆ ಅವರು ಸೂಚನೆ ನೀಡಿದರು.

ಸಭೆಯಲ್ಲಿ ನಗರಾಭಿವೃದ್ಧಿ ಇಲಾಖೆ, ಕಾರ್ಮಿಕ ಇಲಾಖೆ, ಸಣ್ಣ ನೀರಾವರಿ ಇಲಾಖೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಸಮಾಜ ಕಲ್ಯಾಣ ಇಲಾಖೆ,ರೇಷ್ಮೆ ಇಲಾಖೆ,ಮೀನುಗಾರಿಕೆ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳ ಪ್ರಗತಿ ಪರಿಶೀಲನೆ ನಡೆಸಲಾಯಿತು. ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಿಷಿ ಆನಂದ, ಪಾಲಿಕೆ ಆಯುಕ್ತ ವಿಜಯಕುಮಾರ ಮೆಕ್ಕಳಕಿ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬದ್ರೂದ್ದಿನ್ ಸೌದಾಗರ,

ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ಮಹೇಶ ಪೋತದಾರ, ಜಂಟಿ ಕೃಷಿ ನಿರ್ದೇಶಕ ಶಿವನಗೌಡ ಪಾಟೀಲ, ಹೆಸ್ಕಾಂ ಅಧೀಕ್ಷಕ ಅಭಿಯಂತರ ಸಿದ್ದಪ್ಪ ಬಿಂಜಗೇರಿ ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಅಧಿಕಾರಿಗಳು ಉಪಸ್ಥಿತರಿದ್ದರು.

# ನಗರಗಳಲ್ಲಿ ಆರ್‌ಎಸ್‌ಎಸ್ ಪಥಸಂಚಲನ



**ರಬಕವಿ :** ನಗರದಲ್ಲಿ ರಾಷ್ಟ್ರೀಯ ಸ್ವಯಂ ಸೇವಕ ಸಂಘದ ಶತಾಬ್ದಿ ವರ್ಷದ ನಿಮಿತ್ಯ ಸಾವಿರಕ್ಕಿಂತಲೂ ಹೆಚ್ಚಿನ ಗಣ ವೇಷಧಾರಿಗಳಿಂದ ಆಕರ್ಷಕ ಪಥ ಸಂಚಲನ ನಡೆಯಿತು. ಭಾನುವಾರ ಸಂಜೆ 4–30 ಕ್ಕೆ ರಬಕವಿ ಹೊಸ ಬಸ್ ನಿಲ್ದಾಣ, ಹೊಸೂರಿನ ಮಲ್ಲಿಕಾರ್ಜುನ ದೇವಸ್ಥಾನದಿಂದ ಪ್ರಾರಂಭವಾಗಿ, ರಬಕವಿ ಶಂಕರಲಿಂಗ ದೇವಸ್ಥಾನ,

ಹೊಸೂರಿನ ನೀರಿನ ಟಾಕಿ ರಸ್ತೆ ಸೇರಿದಂತೆ ಅವಳಿ ನಗರದ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ಬನಹಟ್ಟಿ ಎಸ್ ಆರ್ ಎ ಮೈದಾನದಲ್ಲಿ ಸಂಪನ್ನಗೊಂಡಿತು.

ದಾರಿಯುದ್ದಕ್ಕೂ ಗಣವೇಷಧಾರಿಗಳ ಪಥ ಸಂಚಲನ ನೋಡಲು ಸಾವಿರಾರು ಮಹಿಳೆಯರು, ಮಕ್ಕಳು ಹಾಗೂ ಯುವಕರು ರಸ್ತೆಯ ಎರಡೂ ಬದಿಗಳಲ್ಲಿ ಜಮಾಯಿಸಿದ್ದರು. ಹಲವು ಕಡೆ ಸಾರ್ವಜನಿಕರು ಹೂವುಗಳನ್ನು ಸ್ವಯಂಸೇವಕರ ತಲೆಯ ಮೇಲೆ, ಭಗವಾಧ್ವಜದ ಮೇಲೆ ಹಾಗೂ ಭಾರತ ಮಾತೆಗೆ, ಡಾ. ಗುರೂಜಿ, ಡಾ. ಹೆಡ್ಗೆವಾರ್ ಅವರ ಭಾವಚಿತ್ರಕ್ಕೆ ಹೂವು ಅರ್ಪಿಸುವ ಮೂಲಕ ಗೌರವ ಸಲ್ಲಿಸಿದರು.

ಮೆರವಣಿಗೆಯಲ್ಲಿ ಭಾರತ ಮಾತಾ ಕೀ ಜೈ ಸೇರಿದಂತೆ ಮಹಾಪುರುಷರ ಘೋಷಣೆಗಳು ಮೊಳಗಿದವು.

ದಾರಿಯುದ್ದಕ್ಕೂ ಅಲ್ಲಲ್ಲಿ ಬಾಲಕರು ಕ್ರಾಂತಿಕಾರಿ ಸ್ವಾತಂತ್ರ್ಯ ಹೋರಾಟಗಾರರ, ಮಹಾಪುರುಷರ ವೇಷ ಭೂಷಣ ಹಾಕಿ ನಿಂತು ಗಮನ ಸೆಳೆದು ಪಥ ಸಂಚಲನಕ್ಕೆ ಮತ್ತಷ್ಟು ಕಳೆ ತಂದರು.

ಈ ಸಂದರ್ಭದಲ್ಲಿ ಪ್ರಮುಖರಾದ ಅಜಯ ಕುಲಕರ್ಣಿ ಮಾತನಾಡಿ ದೇಶಭಕ್ತಿಯ ಕುರಿತು ಆರ್.

ಎಸ್.ಎಸ್. ನ ಚಟುವಟಿಕೆಗಳ ಕುರಿತು ಮತ್ತು ಅದು ನಡೆದ ಬಂದ ದಾರಿ, ಸಂಸ್ಥಾಪಕರು ದೇಶ ಪ್ರೇಮಗೋಸ್ಕರ ಆರ್‌ಎಸ್‌ಎಸ್ ಸಂಘಟಿಸಿದ ಸಂಪೂರ್ಣ ವಿವರಣೆ ನೀಡಿದರು. ಶತಮಾನ ಕಂಡ ಸಂಘ ಪರಿವಾರ ಈಗಲೂ ಇದೆ ; ಮುಂದೇಯೂ ಇರುತ್ತದೆ ಎಂದು ಹೇಳಿದರು. ಪ್ರಭು ಪಾಟೀಲ ವೇದಿಕೆಯ ಮೇಲಿದ್ದರು.

ಶಾಸಕ ಸಿದ್ದು ಸವದಿ, ನಂದಕುಮಾರ ಗಾಯಕವಾಡ, ಡಾ. ವಿನೋದ ಮೇತ್ರಿ, ಸತೀಶ ಹಜಾರೆ, ವಿಜಯಕುಮಾರ ನಾಶಿ, ಸಂಜಯ ತೆಗ್ಗಿ, ಪ್ರದೀಪ ಜುಗಳಿ ಸೇರಿದಂತೆ ಇನ್ನೂ ಅನೇಕ ಮುಖಂಡರು, ಕಾರ್ಯಕರ್ತರು ಭಾಗವಹಿಸಿದ್ದರು.

## ಜಗದಾಳದಲ್ಲಿ ರಾಜ್ಯ ಮಟ್ಟದ ಹೊನಲು ಬೆಳಕಿನ ಪಗಡೆಯಾಟ

# ಗಮನ ಸೆಳೆದ ಗ್ರಾಮೀಣ ಕ್ರೀಡೆ

**ರಬಕವಿ–ಬನಹಟ್ಟಿ :** ಸಮೀಪದ ಜಗದಾಳ ಗ್ರಾಮದಲ್ಲಿ ಬ್ರಹ್ಮದೇವರ ಜಾತ್ರೆ ನಿಮಿತ್ಯ ಶುಕ್ರವಾರ, ಶನಿವಾರ ರಾಜ್ಯಮಟ್ಟದ ಹಗಲು ರಾತ್ರಿ ಪಗಡೆ ಪಂದ್ಯಾವಳಿಗಳು ನಡೆದವು. ಪಗಡೆ ಪಂದ್ಯಗಳು ನೂರಾರು ಜನರನ್ನು ಆಕರ್ಷಿಸಿದವು. ಪಂದ್ಯಾವಳಿಗೆ ಜಗದಾಳದ ಹಿರಿಯರು ಚಾಲನೆ ನೀಡಿದರು.

ಸುಮಾರು31ವರ್ಷಗಳಿಂದಪಗಡೆ ಆಟದ ಸ್ಪರ್ಧೆಯನ್ನು ಗ್ರಾಮದ ಹಿರಿಯರು ನಡೆಸಿಕೊಂಡು ಬಂದಿದ್ದು, ಅದು ಇಂದಿಗೂ ಮುಂದುವರೆದಿದೆ. ವರ್ಷದಿಂದ ವರ್ಷಕ್ಕೆ ಜನಪ್ರಿಯತೆಯನ್ನು ಪಡೆಯುತ್ತಿರುವ ಪಗಡೆ ಸ್ಪರ್ಧೆ ಈ ಭಾಗದಲ್ಲಿ ಹೆಚ್ಚು ಹೆಚ್ಚು ನಡೆಯುತ್ತಿವೆ. ಇಂದು ನಡೆದ ಸ್ಪರ್ಧೆಯಲ್ಲಿ ಬಾಗಲಕೋಟ, ವಿಜಯಪುರ, ಗದಗ, ಬೆಳಗಾವಿ ಹಾಗೂ ಮಹಾರಾಷ್ಟ್ರ ರಾಜ್ಯದ ಸಾಂಗಲಿ, ಕೊಲ್ಲಾಪೂರ ಜಿಲ್ಲೆಗಳಿಂದ ಒಟ್ಟು ಐವತ್ತಕ್ಕೂ ಹೆಚ್ಚು ತಂಡಗಳು ಆಗಮಿಸಿದ್ದವು. ಭಾರಿ ಕುತೂಹಲ ಮೂಡಿಸಿದ್ದ ಪ್ರತಿ ಪಂದ್ಯಗಳು ನೋಡುಗರ ಕಣ್ಮನ ಸೆಳೆದವು. ಹಿರಿಯರಿಗೆ ಮಾತ್ರ ಸೀಮಿತವಾಗಿದ್ದ ಪಗಡೆ ಯುವಕರನ್ನು



ಆಕರ್ಷಿಸುತ್ತಿರುವುದು ಪಗಡೆಯ ಉಳಿವಿಗೆ ಸಾಕ್ಷಿಯಾಗಿದೆ.

ಇಂದಿನ ದಿನಗಳಲ್ಲಿ ನಮ್ಮಿಂದ ದೂರವಾಗುತ್ತಿರುವ ದೇಶಿ ಕ್ರೀಡೆಗಳನ್ನು ಪ್ರತಿಯೊಬ್ಬರೂ ಪ್ರೋತ್ಸಾಹಿಸಬೇಕು. ನಮ್ಮ ಮುಂದಿನ ಪೀಳಿಗೆಗೆ ದೇಶಿ ಕ್ರೀಡೆಗಳನ್ನು ಪರಿಚಯಿಸುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ ಎಂದು ಜಗದಾಳ ಗ್ರಾಮದ ಮುಖಂಡ ಶೇಖರ ನೀಲಕಂಠ ತಿಳಿಸಿದರು.


ಬ್ರಹ್ಮದೇವರ ಜಾತ್ರೆಯ ಸಂದರ್ಭದಲ್ಲಿ ಮೂರು ದಶಕಗಳಿಂದ ಪಗಡೆ ಪಂದ್ಯಾವಳಿಯನ್ನು ಹಮ್ಮಿಕೊಳ್ಳುತ್ತ ಬಂದಿದ್ದೇವೆ. ಆರಂಭದಲ್ಲಿ ನೂರಕ್ಕೂ ಹೆಚ್ಚು ತಂಡಗಳು ಭಾಗವಹಿಸುತ್ತಿದ್ದವು. ಬೇರೆ ಕಡೆಯಿಂದ ಆಗಮಿಸುವ ತಂಡಗಳಿಗೆ ವಸತಿ ಮತ್ತು ಊಟದ ವ್ಯವಸ್ಥೆಯನ್ನು ಮಾಡಲಾಗುತ್ತಿದೆ ಎಂದು ಶೇಖರ ನೀಲಕಂಠ ತಿಳಿಸಿದರು.

ಈ ಸಂದರ್ಭದಲ್ಲಿ ಜಡಯ್ಯ ಹಿರೇಮಠ, ಬಸಯ್ಯ ಕಾಡದೇವರಮಠ, ಹನಮಂತ ಗೌಡ ಪಾಟೀಲ, ಹೊನ್ನಪ್ಪ ಕುಳ್ಳೊಳ್ಳಿ, ಕಾಡಪ್ಪ ಕಬಾಡಗಿ, ಉಳ್ಳಾಗಡ್ಡಿ, ಮಹಾನಿಂಗ ಚಿಂಚಲಿ, ಶಿವಾನಂದ ಕಚ್ಚು, ಸುಭಾಸ ಉಳ್ಳಾಗಡ್ಡಿ ಸೇರಿದಂತೆ ಇನ್ನೂ ಅನೇಕರು ಉಪಸ್ಥಿತರಿದ್ದರು.

# ಆಕರ್ಷಕ ಬೃಹತ್ ಪಥ ಸಂಚಲನ: ಕಣ್ತುಂಬಿಕೊಂಡ ಜನತೆ

**ರಬಕವಿ–ಬನಹಟ್ಟಿ :** ನಗರದಲ್ಲಿ ಭಾನುವಾರ ಆರ್‌ಎಸ್‌ಎಸ್ ಪಥ ಸಂಚಲನದ ಹಿನ್ನೆಲೆಯಲ್ಲಿ ಹಬ್ಬದ ವಾತಾವರಣ ನಿರ್ಮಾಣಗೊಂಡಿತ್ತು. ನಗರದ ಪ್ರಮುಖ ಬೀದಿಗಳನ್ನು ಬಣ್ಣ ಬಣ್ಣದ ರಂಗೋಲಿ, ತಳಿರು ತೋರಣಗಳಿಂದ, ವಿದ್ಯುತ್ ದೀಪಗಳಿಂದ ಆಕರ್ಷಕವಾಗಿ ಶೃಂಗರಿಸಲಾಗಿತ್ತು.

ಬನಹಟ್ಟಿ ನಗರದ ಹಳೆ ನೀರಿನ ಟ್ಯಾಂಕ್ ಹತ್ತಿರದ ಚೌಡಯ್ಯ ವೃತ್ತದಿಂದ ಆರಂಭವಾದ ಪಥ ಸಂಚಲನ ನೂಲಿ ಚಂದಯ್ಯ ವೃತ್ತ, ಸಂಗೊಳ್ಳಿ ರಾಯಣ್ಣ ವೃತ್ತ, ಸೋಮವಾರ ಪೇಟೆ, ಶಂಕರಲಿಂಗ ದೇವಸ್ಥಾನ, ಹಳೆಯ ಗ್ರಂಥಾಲಯ, ಮಹಾತ್ಮಾ ಗಾಂಧಿ ವೃತ್ತ, ರಥ ಬೀದಿ, ಸುಟ್ಟಟ್ಟಿ ಲೇನ್, ತಮ್ಮಣ್ಣಪ್ಪ ರಸ್ತೆ ಮೂಲಕ





ಎಸ್. ಆರ್. ಎ. ಮೈದಾನದವರೆಗೆ ನಡೆಯಿತು. ಪಥಸಂಚಲನದಲ್ಲಿ ಸಾವಿರಾರು ಸಂಖ್ಯೆಯಲ್ಲಿ ಗಣವೇಷಧಾರಿಗಳು ಪಾಲ್ಗೊಂಡಿದ್ದರು.

ರಸ್ತೆಯುದ್ದಕ್ಕೂ ಸಾವಿರಾರು ಸಂಖ್ಯೆಯಲ್ಲಿ ಜನರು ಅದನ್ನು ವೀಕ್ಷಿಸಿ ಕಣ್ತುಂಬಿಕೊಂಡರು.

ಘೋಷ ವಾದ್ಯಮೇಳಗಳು: ಸಾವಿರಾರು ಜನ ಗಣವೇಷಧಾರಿಗಳು ಪಥ ಸಂಚಲನದಲ್ಲಿ ಭಾಗವಹಿಸಿದ್ದರು.

ಗಣವೇಷಧಾರಿಗಳ ತಲೆಯ ಮೇಲೆ ಮಕ್ಕಳು, ಮಹಿಳೆಯರು ದಾರಿಯುದ್ದಕ್ಕೂ ಪುಷ್ಪವೃಷ್ಟಿಗೈದು ಸಂಭ್ರಮಿಸಿದರು. ಪಥ ಸಂಚಲನದ ರಸ್ತೆಗಳನ್ನು ತಳಿರು ತೋರಣ, ರಂಗೋಲಿಗಳಿಂದ ಅಲಂಕರಿಸಲಾಗಿತ್ತು.

ಭಾರತಮಾತಾಕೀಜೈ, ಹರಹರಮಹಾದೇವ, ಜೈ ಶ್ರೀರಾಮ, ವಂದೇ ಮಾತರಂ ಘೋಷಣೆಗಳು ಮೈ ನವಿರೇಳಿಸಿದವು. ಮಾರ್ಗದ ಪ್ರಮುಖ ಸ್ಥಳಗಳಲ್ಲಿ ರಾಷ್ಟ್ರ ನಾಯಕರ ಛದ್ಮ ವೇಷಧಾರಿ ಮಕ್ಕಳು ಎಲ್ಲರ ಗಮನ ಸೆಳೆದರು.

ಶಾಸಕ ಸಿದ್ದು ಸವದಿ, ಬ್ರಿಜ್ಮೋಹನ ಡಾಗಾ, ಶಿವಾನಂದ ಗಾಯಕವಾಡ, ಬಸಯ್ಯ ಹಿರೇಮಠ, ಈರಯ್ಯ ಕಾಡದೇವರ, ಶಿವಾನಂದ ಗಾಯಕವಾಡ, ಮೋಹನ ಪತ್ತಾರ, ಜಿ. ಎಸ್. ಗೊಂಬಿ, ಶ್ರೀಶೈಲ ಬೀಳಗಿ, ಸಂಜಯ ಹನಗಂಡಿ, ಅಶೋಕ ರಾವಳ, ಶಿವಾನಂದ ಬುದ್ನಿ, ಭೀಮಸಿ ಆದಗೊಂಡ, ರಾಚು ಶಿರೋಳ, ಸೋಮು ಅಬಕಾರ ಸೇರಿದಂತೆ ಇನ್ನೂ ಅನೇಕರು ಭಾಗವಹಿಸಿದ್ದರು. ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ, ಮೂರು ಜನ ಡಿವೈಎಸ್ಪಿ, ಆರು ಜನ ಸಿಪಿಐ ಸೇರಿದಂತೆ ನಾಲ್ಕು ನೂರು ಜನ ಪೊಲೀಸರನ್ನು ಬಂದೋಬಸ್ತಿಯಾಗಿ ನಿಯೋಜನೆ ಮಾಡಲಾಗಿತ್ತು.

# ಇಳಕಲ್ ನಗರಸಭೆಯ ರೂ. 143.13 ಲಕ್ಷಗಳು ಕಾಮಗಾರಿಗೆ ಶಾಸಕ ವಿಜಯಾನಂದ ಕಾಶಪ್ಪನವರ ಭೂಮಿ ಪೂಜೆ

**ಇಲಕಲ್,** ಅಕ್ಟೋಬರ್ 18 ಶನಿವಾರ ಇಲಕಲ್ ನಗರಸಭೆಯ ಸನ್ 2025__ 26 ನೇ ಸಾಲಿನ 15ನೇ ಹಣಕಾಸು ಅನುದಾನ ಎಸ್ ಎಫ್ ಸಿ ಬಂಡವಾಳ ಸೃಜನಿಕ ಅನುದಾನದಲ್ಲಿ ನಗರದ ವಿವಿಧ ವಾರಡಗಳಲ್ಲಿ ಮೂಲಭೂತ ಸೌಕರ್ಯಗಳಾದ ರಸ್ತೆ, ಒಳಚರಂಡಿ ನಿರ್ಮಾಣ, ಅಂದಾಜು ಮೊತ್ತ 143.13 ಲಕ್ಷಗಳು ರೂಪಾಯಿ ಕಾಮಗಾರಿಗಳ ಭೂಮಿ ಪೂಜಾ ಸಮಾರಂಭ ಕ್ಷೇತ್ರದ ಶಾಸಕರಾದ ವಿಜಯಾನಂದ ಕಾಶಪ್ಪನವರ ಅವರ ಅಮೃತ ಹಸ್ತದಿಂದ ನೆರವೇರಿತು.



**ಕಾಮಗಾರಿಗಳು ಹಾಗೂ ಅಂದಾಜು ಮೊತ್ತ**

1)ನಗರದ ಗೊರಬಾಳ ನಾಕಾ ಹತ್ತಿರ ಇರುವ ಸೇತುವೆಯ ಮೇಲೆ ಸೀಮೆಂಟ್ ಕಾಂಕ್ರೀಟ್ ರಸ್ತೆ ನಿರ್ಮಾಣ ಮಾಡುವುದು 10 ಲಕ್ಷ ರೂಪಾಯಿ,

2)ವಾರ್ಡ್ ನಂಬರ್ 30ರಲ್ಲಿ ಅಯ್ಯಪ್ಪ ಸ್ವಾಮಿ ದೇವಸ್ಥಾನದಿಂದ ರಮೇಶ್ ಬೊಮ್ಮಣಗಿ ಅವರ ಮನೆಯವರಿಗೂ ಒಳಚರಂಡಿ ನಿರ್ಮಾಣ ಮಾಡುವುದು 12 ಲಕ್ಷ ರೂಪಾಯಿ.

3) ನಗರದ ಹಿಂದೂ ರುದ್ರ ಭೂಮಿಯನ್ನು ಅಭಿವೃದ್ಧಿ ಪಡಿಸುವುದು 5 ಲಕ್ಷ ರುಪಾಯಿ

4) ವಾರ್ಡ್ ನಂಬರ್ 9ರಲ್ಲಿ ಉದ್ಯಾನವನದ ಹೊಸದಾಗಿ ಬೋರ್ ಕೊರಿವುದು 27.9 ಲಕ್ಷ ರೂಪಾಯಿ, 5)ವಾರ್ಡ್ ನಂಬರ್ 2ರಲ್ಲಿ ಸಂಗಯ್ಯ ಮಠ ಮನೆಯಿಂದ ರಾಜು ಬಡಿಗೇರ್ ಮನೆವರೆಗೆ ಸಿಮೆಂಟ್ ಕಾಂಕ್ರೀಟ್ ರಸ್ತೆ ನಿರ್ಮಾಣ ಮಾಡುವುದಕ್ಕಾಗಿ 7 ಲಕ್ಷ ರೂಪಾಯಿಗಳು

6) ನಗರದ ಸರ್ಕಾರಿ ಆಸ್ಪತ್ರೆಯಿಂದ ಟಿಪು ಸುಲ್ತಾನ್ ಸರ್ಕಲ್ ವರೆಗೆ ಹಾಗೂ ಟಿಪು ಸುಲ್ತಾನ್ ಸರ್ಕಲ್ ದಿಂದ ಮುರ್ತುಜಾ ಖಾದರಿ ದರ್ಗಾ ಡಾಂಬರ್ ರಸ್ತೆ ನಿರ್ಮಾಣಕ್ಕೆ 30 ಲಕ್ಷ ರೂಪಾಯಿಗಳು.

7) ವಾರ್ಡ್ ನಂಬರ್ 29 ರಲ್ಲಿ ಚಂದ್ರಹಾಸ್ ಹೆರೂರ್ ಮನೆಯಿಂದ ಅಪ್ಪಣ್ಣ ಹಡಪದ ಮನೆಯವರಿಗೂ ಹೆಚ್ಡಿಪಿಇ ಪೈಪ್ ಲೈನ್ ಅಳವಡಿಸುವುದು 4 ಲಕ್ಷ ರೂಪಾಯಿಗಳು.

8) ವಾರ್ಡ್ ನಂಬರ್ 17ರಲ್ಲಿ ಬಸವರಾಜ ಜಮಲಾಪುರ ಮನೆ ಹತ್ತಿರ ಭಾವಿಯ ಊಳು ತೆಗೆದು ಅಭಿವೃದ್ಧಿಪಡಿಸುವುದು 4.5 ಲಕ್ಷ ರೂಪಾಯಿಗಳು.

9) ನಗರದ ಜೂನಿಯರ್ ಕಾಲೇಜಿನಲ್ಲಿ ಮಳೆ ನೀರು ಕೊಯ್ದು ಅಳವಡಿಸುವುದು 4.5 ಲಕ್ಷ ರೂಪಾಯಿಗಳು.

10) ನಗರದ ಹಿಂದೂ ರುದ್ರ ಭೂಮಿಯಲ್ಲಿ ನೀರಿನ ವ್ಯವಸ್ಥೆ ಕಲ್ಪಿಸುವುದುಕ್ಕೆ 7 ಲಕ್ಷ ರೂಪಾಯಿಗಳು.

11) ಅಂಬೇಡ್ಕರ್ ಭವನದ ಪಕ್ಕದಲ್ಲಿ ನಗರ ಸಭೆ ಘನ ತ್ಯಾಜ್ಯ ವಿಲೇವಾರಿ ವಾಹನದ ನಿಲುಗಡೆ ಜಾಗ ಅಭಿವೃದ್ಧಿ ಪಡಿಸುವದಕ್ಕೆ 9.9 ಲಕ್ಷ ರೂಪಾಯಿಗಳು.

12) ವಾರ್ಡ್ ನಂಬರ್ 24ರಲ್ಲಿ ನಾನಪ್ಪ ಮುದುಕರ ಮನೆಯಿಂದ ಘಟಿಗೆನೊರ ಮನೆವರೆಗೂ ಒಳಚರಂಡಿ ನಿರ್ಮಾಣ ಮಾಡುವುದು 1.91 ಲಕ್ಷ ರೂಪಾಯಿಗಳು.

13) ವಾರ್ಡ್ ನಂಬರ್ 8 ರಲ್ಲಿ ಗೌಳೇರ ಗುಡಿ ಶಿವಪ್ಪ ಭಜಂತ್ರಿ ಮನೆಯಿಂದ ಕೃಷ್ಣ ಭಜಂತ್ರಿ ಅವರ ಮನೆವರೆಗೂ ಸಿಸಿ ರಸ್ತೆ ನಿರ್ಮಾಣ ಮಾಡುವುದು 6.10 ಲಕ್ಷ ರೂಪಾಯಿಗಳು

14) ನಗರದ ವಾರ್ಡ್ ನಂಬರ್ 28 ರಲ್ಲಿ ಸರ್ ಶಂಭು ಬಳಿಗಾರ ಮನೆಯಿಂದ ಹೊಸಮನಿ ಕಲ್ಯಾಣ ಮಂಟಪ ದ ವರೆಗೂ ಸಿಸಿ ರಸ್ತೆ ನಿರ್ಮಾಣ 12.2 ಲಕ್ಷ ರೂಪಾಯಿಗಳು ಮೀಸಲು ಆಗಿದ್ದು.

ಈ ಎಲ್ಲಾ ಕಾಮಗಾರಿಗಳಿಗೆ ಚಾಲನೆ ನೀಡಿದರು ಈ ಸಂದರ್ಭದಲ್ಲಿ ನಗರಸಭೆ ಅಧ್ಯಕ್ಷರಾದ ಸುಧಾರಣೆಸಂಗಮ, ನಗರಸಭೆಉಪಾಧ್ಯಕ್ಷರಾದ ಕಾಳಮ್ಮ ಜಕ್ಕಾ ನಗರಸಭೆ ಸದಸ್ಯರು ನಗರಸಭೆ ಪೌರಾಯುಕ್ತರಾದ ಶ್ರೀನಿವಾಸ ಜಾಧವ, ಕಾಂಗ್ರೆಸ್ ಪಕ್ಷದ ಮುಖಂಡರು ಸಾರ್ವಜನಿಕರು ಉಪಸ್ಥಿತರಿದ್ದರು.

# ದೇಹ ರಚನಾ ವಿಜ್ಞಾನವುಳ್ಳ ಕರುಣಹಸಿಗೆ ಕೃತಿ

**ಕಲಬುರಗಿ:** ಬಸವ ಸಮಿತಿಯ ಅನುಭವ ಮಂಟಪದಲ್ಲಿ ಲಿಂಗೈಕ್ಯ ಧರ್ಮರಾಜ್ ಅಫ್ಜಲ್ಪುರ್ಕರ್ ಸ್ಮರಣಾರ್ಥ ಜರುಗಿದ ಅರಿವಿನ ಮನೆ 872 ನೆಯ ದತ್ತಿ ಕಾರ್ಯಕ್ರಮದಲ್ಲಿ ಡಾ.ಚಿತ್ಕಳ ಮಠಪತಿ ಅವರು ಮಾತನಾಡಿ ಚನ್ನಬಸವಣ್ಣನವರು ರಚಿಸಿದ ಕರಣ ಹಸಿಗೆ ಕೃತಿಯು ವೈದ್ಯಕೀಯ ವಿಜ್ಞಾನದ ದೇಹ ರಚನಾ ಶಾಸ್ತ್ರವನ್ನು ವೈಜ್ಞಾನಿಕವಾಗಿ ವಿವರಿಸುವ ಕೃತಿಯಾಗಿದೆ ಎಂದು ವೈದ್ಯ ವಿಜ್ಞಾನಿ ಡಾ.ಪಿ ಎಸ್ ಶಂಕರ ಅವರು ಹೇಳಿದ್ದಾರೆ ಎಂದರು . ಚನ್ನಬಸವಣ್ಣನವರು ಸ್ವಯಂಭು ಜ್ಞಾನಿಗಳಾಗಿದ್ದರು ಎಂದು ಅಲ್ಲಮಪ್ರಭುದೇವರು ತಮ್ಮ



ವಚನದಲ್ಲಿ ಹೇಳಿದ್ದಾರೆ .ಜ್ಞಾನಕ್ಕೆ ಕಿರಿಯರು ಕಿರಿಯರು ಎಂಬುದು ಇರುವುದಿಲ್ಲ.ಚನ್ನಬಸವಣ್ಣನವರು ಬಸವಣ್ಣನವರಅಕ್ಕನಾಗಮ್ಮನವರ ಮಗನಾಗಿದ್ದಾರೆ.

ಚನ್ನಬಸವಣ್ಣನವರು ತಮ್ಮ ಕಿರಿಯ ವಯಸ್ಸಿನಲ್ಲಿ ಹಿರಿದಾದ ಜ್ಞಾನವನ್ನುಹೊಂದಿದ್ದರು.ಅವರು ತಮ್ಮ 24ನೆಯ ವಯಸ್ಸಿನಲ್ಲಿಯೇ ಅಪಾರಜ್ಞಾನ ಹೊಂದಿದ್ದರು.

ಸೊಲ್ಲಾಪುರದ ಸಿದ್ದರಾಮರಿಗೆ ಲಿಂಗದೀಕ್ಷೆಯನ್ನು ನೀಡಿದವರು ಆಕಳ ಹಾಲಿನಲ್ಲಿ ತುಪ್ಪವಿದೆ .ಆ ಹಾಲಿಗೆ ಸಂಸ್ಕಾರ ನೀಡಿದಾಗ ತುಪ್ಪವಾಗುವಂತೆ ನಮ್ಮಲ್ಲೇ ಇರುವ ದೇವರನ್ನು ಸಾಕ್ಷಾತ್ಕಾರಗೊಳಿಸಿಕೊಳ್ಳಲು ನಾವು ಸಂಸ್ಕಾರ ಪಡೆದುಕೊಳ್ಳಬೇಕು ಎಂದು ಶರಣರು ವಚನದಲ್ಲಿ ತಿಳಿಸಿದ್ದಾರೆ ಎಂದು ನುಡಿದರು .

ಕಾರ್ಯಕ್ರಮದಲ್ಲಿ ಕಲ್ಬುರ್ಗಿ ಬಸವ ಸಮಿತಿಯ ಅಧ್ಯಕ್ಷರಾದ ಡಾ. ವಿಲಾಸವತಿ ಕೂಬಾ , ಉಪಾಧ್ಯಕ್ಷರಾದ ಡಾ. ಜಯಶ್ರೀ ದಂಡೆ , ಕಾರ್ಯದರ್ಶಿ ಡಾ. ಆನಂದ ಸಿದ್ಧಾಮಣಿ ,ದತ್ತಿ ದಾಸೋಹಿಗಳಾದ ಭಾರತೀ ಹುಲಗೋಳ , ಡಾ.ಕೆ. ಎಸ್. ವಾಲಿ , ಶರಣಗೌಡ ಪಾಟೀಲ್ ಪಾಳ ,ಬಂಡಪ್ಪ ಕೇಸುರ್, ಉದ್ದಂಡಯ್ಯ ಭಾಗವಹಿಸಿದರು.

# ಪ್ರಜಾಪ್ರಭುತ್ವ ಉಳಿಸಲು ಆರೆಸ್‌ಎಸ್ ನಿಷೇಧಕ್ಕೆ ಆಗ್ರಹ

**ಜೇವರಗಿ :** ಪ್ರಜಾಪ್ರಭುತ್ವ ಉಳಿಸಿ,ಆರ್ ಎಸ್ ಎಸ್ ನಿಷೇಧಿಸಿ ಹಾಗೂ ಸಚಿವ ಪ್ರಿಯಾಂಕ ಖರ್ಗೆಗೆ ಜೀವ ಬೆದರಿಕೆ ಹಾಕಿರುವವರನ್ನು ಕೂಡಲೇ ಗಡಿಪಾರು ಮಾಡಬೇಕು.

ಸಚಿವ ಪ್ರಿಯಾಂಕ ಖರ್ಗೆಗೆ ಜಡ್ ಪ್ಲಸ್ ಭದ್ರತೆ ನೀಡಬೇಕುಎಂದು ದಲಿತ ಸಂಘಟನೆಗಳ ಸಮನ್ವಯ ಸಮಿತಿ ಆಗ್ರಹಿಸಿದೆಪಟ್ಟಣದ ಅಂಬೇಡ್ಕರ್ ಭವನದಲ್ಲಿ ಸಭೆ ನಡೆಸಿ, ಪ್ರತಿಭಟನೆ ಕೈ ಬಿಟ್ಟು ಮಿನಿ ವಿಧಾನಸೌಧಕ್ಕೆ ಆಗಮಿಸಿ ತಹಸೀಲ್ದಾರ ಮೂಲಕ ಮುಖ್ಯಮಂತ್ರಿಗೆ ಮನವಿ ಪತ್ರ ನೀಡಿದರು.



ಮನವಿ ಪತ್ರ ನೀಡುವ ಸಂದರ್ಭದಲ್ಲಿ ಶಾಂತಪ್ಪ ಕೂಡಲಗಿ,ಚಂದ್ರಶೇಖರ ಹರನಾಳ, ಸುರೇಶ್ ಹಾದಿಮನಿ,ಪ್ರಕಾಶ್ ಕಟ್ಟಿ,ಗೊಲ್ಲಾಳಪ್ಪ ಕಡಿ,ಮೊಯಿನೂದ್ದಿನ ಇನಾಂದಾರ,ಭೀಮರಾಯ ನಗನೂರ,ಮಲ್ಲಣ್ಣ ಕೊಡಚಿ,ಶ್ರೀಹರಿ ಕರಕಿಹಳ್ಳಿ,ವಿಶ್ವರಾಧ್ಯ ಗಂವಾರ,ಸುನೀಲ್ ಚೆನ್ನೂರ,,ದವಲಪ್ಪ ಮದನ,ರವಿ ಕುರಳಗೇರಾ,ಸಿದ್ದು ಕೆರೂರ,ಮಾಪಣ್ಣ ಕಟ್ಟಿ,ಮಲ್ಲಿಕಾರ್ಜುನ ಕೆಲ್ಲೂರ,ಮಹೇಶ್ ಕೋಕಿಲೆ,ಶಿವಶರಣಪ್ಪ ಮಾರಡಗಿ,ಗುಂಡಪ್ಪ ಜಡಗಿ,ಶಿವಶರಣಪ್ಪ ಮಂದೆವಾಲ,ಪರಮಾನಂದ ಯಲಗೋಡ, ಯಶವಂತ ಬಡಿಗೇರ, ಶಿವಕುಮಾರ್ ಹೆಗಡೆ,ಶ್ರೀಮಂತ ಕಿಲ್ಲೆದಾರ,ಭಾಗಣ್ಣ ಸಿದ್ನಾಳ,ಗುರುಲಿಂಗಪ್ಪ ವುಡೂರ,ಸಿದ್ದು ಶರ್ಮಾ,ಭೀಮರಾಯ ಬಳಬಟ್ಟಿ, ವಿಶ್ವರಾಧ್ಯ ಗೋಪಾಲಕರ,ಭಾಗಣ್ಣ ಕಟ್ಟಿ, ಸುಭಾಷ ಕುಮ್ಮನಸಿರಸಗಿ ಸೇರಿದಂತೆ ಹಲವಾರು ಮುಖಂಡರು ಇದ್ದರು.

# ಬಿಜೆಪಿ ಪಕ್ಷ ಆರ್‌ಎಸ್‌ಎಸ್ ಅನ್ನು ಗುರಾಣಿಯಂತೆ ಬಳಸಿಕೊಂಡು ರಾಜಕೀಯ ಬೇಳೆ ಬೇಯಿಸಿಕೊಳ್ಳುತ್ತಿದೆ: ಅರುಣ್ ಕುಂದರ್ ಕಲ್ಗದ್ದೆ.

**ಬೆಂಗಳೂರು :** ಆರ್.ಎಸ್.ಎಸ್. ಮತ್ತು ಪ್ರಿಯಾಂಕ್ ಖರ್ಗೆ ವಿಚಾರವಾಗಿ ಸಾಕಷ್ಟು ಚರ್ಚೆಗಳು ನಡೆಯುತ್ತಿವೆ. ಇಲ್ಲಿ ಗಮನಿಸಬೇಕಾದ ವಿಚಾರ ಒಂದೇ. ಮಾನ್ಯ ಪ್ರಿಯಾಂಕ್ ಖರ್ಗೆ ಅವರು ಆರ್.ಎಸ್.ಎಸ್. ಅನ್ನು ಗುರಿಯಾಗಿಸಿಕೊಂಡು ಯಾವುದೇ ಬೇಡಿಕೆಗಳನ್ನು ಇಟ್ಟಿಲ್ಲ ಮತ್ತು ಸರ್ಕಾರಕ್ಕೆ ಪತ್ರವನ್ನು ಬರೆದಿಲ್ಲ ಎಂದು ಹಿಂದುಳಿದ ವರ್ಗಗಳ ಆಯೋಗದ ಮಾಜಿ ಸದಸ್ಯ, ನ್ಯಾಯವಾದಿ ಅರುಣ್ ಕುಂದರ್ ಕಲ್ಗದ್ದೆ ಹೇಳಿದ್ದಾರೆ.

ಸಾರ್ವಜನಿಕ ಸಂಸ್ಥೆಗಳು ಸರ್ಕಾರಿ ಸ್ಥಳಗಳಲ್ಲಿ ಅಥವಾ ಸರ್ಕಾರಿ ಸ್ಥಳಗಳನ್ನು ಬಳಸುವಾಗ ಅನುಮತಿ ಪಡೆಯಬೇಕು ಎಂದಷ್ಟೇ ಬೇಡಿಕೆಯನ್ನು ಸರ್ಕಾರದ ಮುಂದೆ ಇಟ್ಟಿದ್ದರು. ಸರ್ಕಾರ ಆ ನಿಟ್ಟಿನಲ್ಲಿ ಸರ್ಕಾರಿ ಸ್ಥಳಗಳಲ್ಲಿ ಯಾವುದೇ ಕಾರ್ಯಕ್ರಮ ಆಯೋಜಿಸಲು ಪೂರ್ವಾನುಮತಿ ಪಡೆಯಬೇಕು ಎನ್ನುವ ಆದೇಶವನ್ನು ಹೊರಡಿಸಿದೆ. ಇಲ್ಲಿ ಸ್ಪಷ್ಟವಾಗಿ ಎಲ್ಲಿಯೂ ಕೂಡ ಆರ್.ಎಸ್.ಎಸ್. ಅನ್ನು ಟಾರ್ಗೆಟ್ ಮಾಡಿ ಈ ಹೇಳಿಕೆಯನ್ನು ಅಥವಾ ಈ ಆದೇಶವನ್ನು ಮಾಡಿರುವುದು ಕಂಡು ಬರುತ್ತಿಲ್ಲ. ಆದರೂ ಬಿಜೆಪಿ ಪಕ್ಷ ವು ಈ ವಿಚಾರವನ್ನು ಮೈಮೇಲೆ ಎಳೆದುಕೊಂಡಿದೆ. ಇಲ್ಲಿ ಒಂದು ವಿಷಯವನ್ನು ನಾವು ತಿಳಿದುಕೊಳ್ಳಬೇಕಾಗಿದೆ, ರಾಜಕೀಯವಾಗಿ ಮತ್ತು ಸೈದ್ಧಾಂತಿಕವಾಗಿ ಕಾಂಗ್ರೆಸ್ ಅನ್ನು ಸೋಲಿಸಲು ಸಾಧ್ಯವಾಗದ ಹಿನ್ನೆಲೆಯಲ್ಲಿ, ನೇರವಾಗಿ ಕಾಂಗ್ರೆಸ್ ಸರ್ಕಾರವನ್ನು ಎದುರುಹಾಕಿಕೊಳ್ಳಲು ಸಾಧ್ಯವಾಗದ ಹಿನ್ನೆಲೆಯಲ್ಲಿ, ಪರೋಕ್ಷವಾಗಿ ಆರ್.ಎಸ್.ಎಸ್. ಅನ್ನು ಮುಂದೆ ಇಟ್ಟು ಬಿಜೆಪಿ ತನ್ನ ರಾಜಕೀಯ ತಂತ್ರಗಾರಿಕೆಯನ್ನು ನಡೆಸುತ್ತಿದೆ.

ಇನ್ನು ಚಿತ್ತಾಪುರ ಕ್ಷೇತ್ರದಲ್ಲಿ ಆರ್ ಎಸ್ ಎಸ್ ಬಲಪ್ರದರ್ಶನ ಎನ್ನುವ ತಲೆಬರಹದಲ್ಲಿ ಒಂದಿಷ್ಟು ಸುದ್ದಿಗಳು ಓಡಾಡುತ್ತಿದೆ. ಇದನ್ನ ಗಮನಿಸಿದರೆ ಸ್ಪಷ್ಟವಾಗಿ ತಿಳಿದುಬರುವುದು ಒಂದೇ ಬಿಜೆಪಿ ತನ್ನ ರಾಜಕೀಯ ಬೇಳೆ ಬೇಯಿಸಿಕೊಳ್ಳಲು ಆರ್‌ಎಸ್‌ಎಸ್ ಅನ್ನ ಗುರಾಣಿಯಾಗಿ ಬಳಸಿಕೊಳ್ಳುತ್ತಿದ್ದೇವೆ ವಿನಹ ಮತ್ತೆ ಯಾವುದೇ ಕಾರಣಗಳು ಇಲ್ಲ. ಸಾರ್ವಜನಿಕ ಸ್ಥಳಗಳಲ್ಲಿ ಕಾರ್ಯಕ್ರಮ ಆಯೋಜನೆಗೆ ಪೂರ್ವಾನುಮತಿ ಪಡೆಯಬೇಕು ಎನ್ನುವುದು ಕೇವಲ ಆರ್ ಎಸ್‌ಎಸ್ ಗೆ ಮಾತ್ರ ಅನ್ವಯಿಸುವುದಿಲ್ಲ ಎಲ್ಲಾ ಸಾರ್ವಜನಿಕ ಸಂಘ ಸಂಸ್ಥೆಗಳು ಕೂಡ ಇದು ಅನ್ವಯಿಸುತ್ತದೆ ಎನ್ನುವುದನ್ನು ಬಿಜೆಪಿಗರು ಮರೆತಂತಿದೆ ಎಂದಿದ್ದಾರೆ.

# ಮಾಜಿ ಸಂಸದ ರಮೇಶ ಕತ್ತಿ ವಿರುದ್ಧ ಪ್ರತಿಭಟನೆ

**ಕಲಬುರಗಿ :** ವಾಲ್ಮೀಕಿ ಸಮುದಾಯಕ್ಕೆ ಅವಹೇಳನ ಮಾಡಿದ ಮಾಜಿ ಸಂಸದ ರಮೇಶ ಕತ್ತಿಯನ್ನು ಕೂಡಲೇ ಬಂಧಿಸಿ ಗಡಿಪಾರು ಮಾಡಬೇಕು ಎಂದು ಒತ್ತಾಯಿಸಿ ಕಲ್ಯಾಣ ಕರ್ನಾಟಕ ಪ್ರದೇಶ ವಾಲ್ಮೀಕಿ ನಾಯಕರ ಸಂಘದ ಮುಖಂಡರು ಸರ್ದಾರ ವಲ್ಲಭಭಾಯಿ ಪಟೇಲ್ ವೃತ್ತದಲ್ಲಿ ಪ್ರತಿಭಟನೆ ನಡೆಸಿದರು. ರಮೇಶ ಕತ್ತಿ ಭಾವಚಿತ್ರವನ್ನು ಕತ್ತೆಯ ಕೊರಳಿಗೆ ಹಾಕಿ ಮೆರವಣಿಗೆ ಮಾಡಿದರು. ನಂತರ ಎಲ್ಲ ಮುಖಂಡರು ರಮೇಶ ಕತ್ತಿಯ ವಿರುದ್ಧ ನಾನಾ ಘೋಷಣೆಗಳನ್ನು ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಜವಾಬ್ದಾರಿ ಸ್ಥಾನದಲ್ಲಿ ಇರುವ ರಮೇಶ ಕತ್ತಿ ವಾಲ್ಮೀಕಿ ಸಮುದಾಯದ ಬಗ್ಗೆ ಹಗುರವಾಗಿ ಮಾತನಾಡಿದ್ದು ಸರಿಯಲ್ಲ. ರಮೇಶ ಕತ್ತಿಯ ಮೇಲೆ ಅಟ್ರಾಸಿಟಿ ಕೇಸ್ ದಾಖಲಿಸಿ ಕೂಡಲೇ ಬಂಧಿಸಿ ಗಡಿಪಾರು ಮಾಡಬೇಕು. ಒಂದುವೇಳೆ ಸರಕಾರ ನಿರ್ಲಕ್ಷ್ಯ ವಹಿಸಿದ್ದರೆ ವಾಲ್ಮೀಕಿ ಸಮಾಜ ಹಾಗೂ ವಿವಿಧ ದಲಿತಪರ ಸಂಘಟನೆಯಿಂದ ರಾಜ್ಯಾದ್ಯಂತ ಉಗ್ರಹೋರಾಟ ನಡೆಸಬೇಕಾಗುತ್ತದೆ ಎಂದು ಎಚ್ಚರಿಸಿದರು. ಕಲ್ಯಾಣ ಕರ್ನಾಟಕ ಪ್ರದೇಶ ವಾಲ್ಮೀಕಿ ನಾಯಕರ ಸಂಘದ ಕಲಬುರಗಿ ವಿಭಾಗೀಯ ಅಧ್ಯಕ್ಷ ನಂದಕುಮಾರ ಮಾಲಿ ಪಾಟೀಲ, ಸಮಾಜದ ಜಿಲ್ಲಾಧ್ಯಕ್ಷ ಶರಣು ಸುಬೇದಾರ, ಮಾರುತಿ ಜಮಾದಾರ್, ವೆಂಕಟೇಶಕವಾಲ್ದಾರ್, ಶ್ರವಣಕುಮಾರ ನಾಯಕ, ನಾಗೇಂದ್ರ ಜವಳಿ, ಸುರೇಶ ಗುಡೂರ್, ವಿಶ್ವ ಮದಕರಿ, ದೇವು, ವಾಲ್ಮೀಕಿ ಸಮಾಜದ ಹಾಗೂ ದಲಿತ

"SIHI KAHI" Kannada Daily Morning, Editor, Owner, Publisher, Printer by **MARUTI BASAVANTAPPA HOASAMANI** Published from Chittaragi Cross, S.C. Colony, Ward No. 9, Amingada-587112, Tq. Hungund Dist : Bagalkot, Karnataka and Printed at **SUDIN PRINTERS**, Sector No. 33, Shop No. 38 & 40, Opp. Ambedkar Bhavan, **NAVANAGAR, BAGALKOT-587 101.** Dist : Bagalkot, Karnataka State